ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYA PRAGATHI Kannada daily
SP NEWS ಡಿಜಿಟಲ್ ನ್ಯೂಸ್ ಕಹಾನಿ
ಪ್ರತಿ ಸುದ್ದಿಯ ಧ್ವನಿ
suryapragathidailynews@gmail.com 9901010109 L2/RNP-1285/TMR/2025-27

Volume:05 ಸಂಪುಟ: 05 | Issue:213 ಸಂಚಿಕೆ: 213 | Date:16-09-2026 Wednesday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

SP NEWS ಸಣ್ ಸುದ್ದಿ

### ಮಧುಗಿರಿ ಪಟ್ಟಣದಲ್ಲಿ ಚತುಷ್ಪಥ ರಸ್ತೆ ಮಂಜೂರು

## ಕೇಂದ್ರ ಸಚಿವ ವಿ. ಸೋಮಣ್ಣ



ಹಲವು ದಶಕಗಳ ಬೇಡಿಕೆಯಾಗಿದ್ದ ಮಧುಗಿರಿ ಪಟ್ಟಣದ ಪ್ರಥಮ ದರ್ಜೆ ಕಾಲೇಜಿನಿಂದ ನೃಪತುಂಗ ಸರ್ಕಲ್ ವರೆಗಿನ ರಾಷ್ಟ್ರೀಯ ಹೆದ್ದಾರಿ-69ರ 390 ಮೀಟರ್ ಬ್ಲಾಕ್ ಸ್ಪಾಟ್ (ಅಪಘಾತ ಸ್ಥಳದಲ್ಲಿ) ಕಳೆದ 8 ವರ್ಷಗಳಿಂದ ನೆನೆಗುಂದಿಗೆ ಬಿದ್ದಿದ್ದು, ಈ ರಸ್ತೆ ಅಗಲಿಕರಣಕ್ಕೆ ಸಾರ್ವಜನಿಕರ ಒತ್ತಾಯವಿತ್ತು ಎಂದು ವಿ. ಸೋಮಣ್ಣ ತಿಳಿಸಿದ್ದಾರೆ.

ಒಟ್ಟು 10 ಅಪಘಾತಗಳು ಸಂಭವಿಸಿ 4 ಮಂದಿ ಮೃತಪಟ್ಟಿದ್ದು 8 ಮಂದಿ ಗಾಯಗೊಂಡಿರುತ್ತಾರೆ ಎಂಬ ವಿಷಯ ತಿಳಿದ ತುಮಕೂರು ಲೋಕಸಭಾ ಸದಸ್ಯರು ಹಾಗೂ ಕೇಂದ್ರ ಸಚಿವ ವಿ. ಸೋಮಣ್ಣನವರು ಕೇಂದ್ರದ ಭೂ ಸಾರಿಗೆ ಮತ್ತು ಹೆದ್ದಾರಿ ಸಚಿವ ಶ್ರೀ ನಿತಿನ್ ಗಡ್ಕರಿ ಅವರನ್ನು ಮತ್ತು ಇಲಾಖೆಯ ಕಾರ್ಯದರ್ಶಿ ಉಮಾಶಂಕರ್‌ರವರನ್ನು ದಿನಾಂಕ: 17.06.2026ರಂದು ಭೇಟಿ ಮಾಡಿ ರಸ್ತೆ ಅಗಲಿಕರಣಕ್ಕೆ ಅನುಮತಿ ನೀಡುವಂತೆ ಕೇಂದ್ರ ಸಚಿವ ವಿ. ಸೋಮಣ್ಣ ಮನವಿ ಮಾಡಿದ್ದರು.

ವಿ. ಸೋಮಣ್ಣನವರ ಮನವಿಗೆ ಸ್ಪಂಧಿಸಿದ ಕೇಂದ್ರ ಸಚಿವ ಶ್ರೀ ನಿತಿನ್ ಗಡ್ಕರಿರವರು ಸದರಿ ಅಪಘಾತ ಸ್ಥಳ ನಿರ್ಮೂಲನೆ ಮಾಡಲು ಸದರಿ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿ ಪಡಿಸಲು ಕೂಡಲೇ ಅನುಮೋದನೆ ನೀಡಿದ್ದರು ಎಂದು ಕೇಂದ್ರ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ಅದರಂತೆ ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ಕಾರ್ಯದರ್ಶಿಯವರು ರೂ. 29.94 ಕೋಟಿ ಅಂದಾಜಿಗೆ ಅನುಮೋದನೆ ಇಂದು ನೀಡಿರುತ್ತಾರೆಂದು ಕೇಂದ್ರ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ತುಮಕೂರು ಸಂಸದ ವಿ. ಸೋಮಣ್ಣನವರು ಮಧುಗಿರಿ ತಾಲ್ಲೂಕಿಗೆ ಹಲವಾರು ಸಂದರ್ಭದಲ್ಲಿ ಭೇಟಿ ನೀಡಿದ್ದಾಗ ಅಲ್ಲಿನ ಸಾರ್ವಜನಿಕರು ಹಾಗೂ ಸ್ಥಳೀಯ ಶಾಸಕರಾದ ಶ್ರೀ ಕೆ.ಎನ್. ರಾಜಣ್ಣನವರು ಈ ಬಗ್ಗೆ ಮನವಿ ಮಾಡಿದ್ದು, ಮನವಿಗೆ ಸ್ಪಂದಿಸಿ ಈ ಚತುಷ್ಪಥ ರಸ್ತೆ ಅನುಮೋದನೆಯನ್ನು ಕೊಡಿಸಿರುವುದಾಗಿ ಕೇಂದ್ರ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ದಶಕಗಳ ಕಾಲದ ಈ ಭಾಗದ ಸಾರ್ವಜನಿಕರ ಬೇಡಿಕೆಯನ್ನು ಶ್ರೀ ನರೇಂದ್ರ ಮೋದಿಜಿರವರ ನೇತೃತ್ವದ ಕೇಂದ್ರ ಸರ್ಕಾರ ಈಡೇರಿಸಿದೆ ಎಂದು ಕೇಂದ್ರ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ತುಮಕೂರು ಜನತೆಯ ಆಶೋತ್ತರವನ್ನು ಪೂರೈಸಿದ ರಾಷ್ಟ್ರದ ಪ್ರಧಾನ ಮಂತ್ರಿಗಳು ಶ್ರೀ ನರೇಂದ್ರ ಮೋದಿ ಹಾಗೂ ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಸಚೀವರು ಶ್ರೀ ನಿತಿನ್ ಗಡ್ಕರಿರವರಿಗೆ ಹಾಗೂ ಇಲಾಖಾ ಕಾರ್ಯದರ್ಶಿ ಉಮಾಶಂಕರ್‌ರವರಿಗೆ ತುಮಕೂರು ಜನತೆಯ ಪರವಾಗಿ ಅಭಿನಂದನೆಯನ್ನು ಕೇಂದ್ರ ಸಚಿವ ವಿ. ಸೋಮಣ್ಣ ಸಲ್ಲಿಸಿದ್ದಾರೆ.

## ಮಳೆ ಕೊರತೆ ಅಕ್ಕಿ ದರ ಏರಿಕೆ ಶಾಕ್

ಸೂರ್ಯಪ್ರಗತಿನ್ಯೂಸ್.ಕಾಂ



ಕರ್ನಾಟಕದಲ್ಲಿ ಸರಿಯಾಗಿ ಮಳೆಯಾಗದೇ ಬೆಳೆ ಇಲ್ಲದೇ ಬರಗಾಲ ಆವರಿಸಿದೆ. ಇನ್ನೊಂದೆಡೆ ಕಚ್ಚಾ ವಸ್ತುಗಳ ಕೊರತೆ ಹಿನ್ನೆಲೆ ಈಗಾಗಲೇ ಅಕ್ಕಿ ಬೆಲೆ ಏರಿಕೆ ಆಗಿತ್ತು.ಇದೀಗ ಮತ್ತೆ ಇಂದಿನಿಂದ ಅಕ್ಕಿ ದರ ಏರಿಕೆ ಆಗಿದ್ದು, ಈ ಬಾರಿ ಒಂದು ಕ್ವಿಂಟಾಲ್ ಮೇಲೆ ಒಂದು ಸಾವಿರ ರುಪಾಯಿಯಷ್ಟು ಏರಿಕೆ ಆಗಿದೆ. ಇದಕ್ಕೆ ಗ್ರಾಹಕರು ಬೇಸರ ವ್ಯಕ್ತಪಡಿಸುತ್ತಿದ್ದಾರೆ.

ರಾಜ್ಯದಲ್ಲಿ ಈ ಬಾರಿ ಸರಿಯಾಗಿ ಮಳೆಯಾಗಿಲ್ಲ. ಡ್ಯಾಮ್ ಗಳಲ್ಲಿ ನೀರಿಲ್ಲ. ಇದರಿಂದ ರೈತರು ಬೆಳೆದ ಬೆಳೆಗಳಿಗೆ ನೀರಿಲ್ಲದೇ ಬೆಳೆಗಳು ಬಂದಿಲ್ಲ. ಇದರಿಂದ ಅಕ್ಕಿ ಬೆಲೆ ನಿರಂತರವಾಗಿ ಏರಿಕೆ ಆಗ್ತಾನೆ ಇದೆ. ಈಗಾಗಲೇ ಎರಡು ಬಾರಿ ಅಕ್ಕಿ ದರ ಏರಿಕೆ ಆಗಿದ್ದು, ಇದೀಗ ಇಂದಿನಿಂದ ಮತ್ತೆ ಅಕ್ಕಿ ದರ ಏರಿಕೆ ಆಗಿದೆ. ಈ ಬಾರಿ ಒಂದು ಕೆಜಿ ನಾರ್ಮಲ್ ಅಕ್ಕಿ ಮೇಲೆ 5 ರಿಂದ 10 ರುಪಾಯಿಯಷ್ಟು ಏರಿಕೆ ಆಗಿದ್ರೆ, ಕ್ವಾಲಿಟಿ ಅಕ್ಕಿ ಮೇಲೆ 10 ರಿಂದ 20 ರುಪಾಯಿ ಏರಿಕೆ ಆಗಿದ್ರೆ, ಒಂದು ಕ್ವಿಂಟಾಲ್ ಮೇಲೆ ಒಂದು ಸಾವಿರ ರುಪಾಯಿಯಷ್ಟು ಏರಿಕೆ ಆಗಿದೆ. ನಾರ್ಮಲ್ ಅಕ್ಕಿ ಚೀಲದ ಮೇಲೆ 200 ರುಪಾಯಿ, ಕ್ವಾಲಿಟಿ ಅಕ್ಕಿ ಮೇಲೆ 250 ರಿಂದ 300 ಏರಿಕೆಯಾಗಿದೆ. ಇನ್ನೂ ಹೊಸ ಅಕ್ಕಿ ದರ ಇಂದಿನಿಂದಲೇ ಏರಿಕೆ ಆಗಿದ್ದು,ಹೋಲ್ ಸೇಲ್ ನಲ್ಲಿ ಒಂದು ಕೆಜಿ ಗೆ 10 ರಿಂದ 20 ರುಪಾಯಿ ಏರಿಕೆ ಆಗಿದ್ರೆ,ರಿಟೇಲ್ ನಲ್ಲಿ ಒಂದು ಕೆಜಿ ಮೇಲೆ 20 ರಿಂದ 40 ರುಪಾಯಿ ಏರಿಕೆ ಆಗಲಿದ್ಯಂತೆ. ಮಳೆ ಸರಿಯಾಗಿ ಬಾರದ ಹಿನ್ನೆಲೆ, ಮೂರು ತಿಂಗಳಲ್ಲಿ ಮೂರನೇ ಬಾರಿಗೆ ಅಕ್ಕಿ ಬೆಲೆ ಏರಿಕೆ ಆಗಿದ್ದು, ಅಕ್ಟೋಬರ್ ನಲ್ಲಿ ಮತ್ತೆ ದರ ಏರಿಕೆ ಆಗಲಿದೆ ಅಂತಿರೋ ಹೋಲ್ ಸೇಲ್ ವ್ಯಾಪಾರಿಗಳು.

ಕಚ್ಚಾ ವಸ್ತುಗಳ ಕೊರತೆಯಿಂದ ಅಕ್ಕಿ ಮೇಲೆ ದರ ಏರಿಕೆ ಆಗಲಿದ್ಯಂತೆ. ಇತ್ತ ಭಾರತದಿಂದ ವಿದೇಶಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಅಕ್ಕಿ ಸಪ್ಲೈ ಆಗುತ್ತಿದೆ. ಅಲ್ಲಿಂದ ಬೇರೆಬೇರೆ ದೇಶಗಳಿಗೆ ಅಕ್ಕಿ ಸಪ್ಲೈ ಆಗ್ತಿದ್ದು, ಇದರಿಂದ ಇಲ್ಲಿ ಅಕ್ಕಿ ಕೊರತೆ ಉಂಟಾಗುತ್ತಿದೆ. ಇದರಿಂದ ಸಿಲಿಕಾನ್ ಸಿಟಿ ಬೆಂಗಳೂರಲ್ಲಿ ಅಕ್ಕಿ ದರ ಏರಿಕೆಗೆ ಪ್ರಮುಖ ಕಾರಣವಾಗಿದೆ. ಈ ಬಗ್ಗೆ ಮಾತನಾಡಿದ ಗ್ರಾಹಕರು ಒಂದು ಚೀಲದ ಮೇಲೆ 250 ರಿಂದ 300 ರುಪಾಯಿ ವರೆಗೆ ದರ ಏರಿಕೆ ಆಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

## ಸೆ.17ರಂದು ಅಪ್ರೆಂಟೀಸ್‌ಶಿಪ್ ಮೇಳ

**ತುಮಕೂರು: ಅಂತರಸನಹಳ್ಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಸೆಪ್ಟೆಂಬರ್ 17ರಂದು ಬೆಳಗ್ಗೆ 10 ಗಂಟೆಗೆ ಅಪ್ರೆಂಟೀಸ್‌ಶಿಪ್ ಮೇಳವನ್ನು ಏರ್ಪಡಿಸಲಾಗಿದೆ. ಈ ಮೇಳದಲ್ಲಿ ವಿವಿಧ ಕೈಗಾರಿಕೋದ್ಯಮಿಗಳು ಪಾಲ್ಗೊಂಡು ಉದ್ಯೋಗಾರ್ಥಿಗಳಿಗೆ ಅವಕಾಶ ಕಲ್ಪಿಸಲಿದ್ದು, ವಿವಿಧ ಕೋರ್ಸುಗಳಲ್ಲಿ ಐಟಿಐ ಉತ್ತೀರ್ಣರಾದ ಅಭ್ಯರ್ಥಿಗಳು ಮೇಳದಲ್ಲಿ ಪಾಲ್ಗೊಂಡು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಸಂಸ್ಥೆಯ ಪ್ರಾಚಾರ್ಯ ಕಿರಣ್ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಯಾರ ವಿರುದ್ಧವೂ ದಾಖಲೆಗಳಿಲ್ಲದೆ ಮಾತನಾಡುವುದಿಲ್ಲ



ರಾಜ್ಯ ರಾಜಕೀಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದ್ದ 'ದೇಶವೇ ಅಲ್ಲೋಲ ಕಲ್ಲೋಲ ಆಗುವ ರೀತಿಯ ಸುದ್ದಿ ಕೊಡುತ್ತೇನೆ' ಎಂಬ ತಮ್ಮ ಹೇಳಿಕೆಗೆ ಕೇಂದ್ರ ಸಚಿವ ಹಾಗೂ ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಮತ್ತೊಮ್ಮೆ ಸ್ಪಷ್ಟನೆ ನೀಡಿದ್ದಾರೆ.

ತಮ್ಮ ಹೇಳಿಕೆಯಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದು ಪುನರುಚ್ಚರಿಸಿರುವ ಅವರು, ರಾಜ್ಯದಲ್ಲಿ ನಡೆಯುತ್ತಿರುವ ಅಕ್ರಮ ಮತ್ತು ಅವ್ಯವಹಾರಗಳ ಬಗ್ಗೆ ದಾಖಲೆಗಳ ಆಧಾರದಲ್ಲಿ ಜನರ ಮುಂದಿಡುವುದು ತಮ್ಮ ಜವಾಬ್ದಾರಿ ಎಂದು ಹೇಳಿದ್ದಾರೆ. ಇತ್ತೀಚಿನ ಪತ್ರಿಕಾಗೋಷ್ಠಿಯಲ್ಲೂ ಇದೇ ನಿಲುವನ್ನು ಮುಂದುವರಿಸಿರುವ ಕುಮಾರಸ್ವಾಮಿ, ತಾವು ಯಾರ ವಿರುದ್ಧವೂ ದಾಖಲೆಗಳಿಲ್ಲದೆ ಮಾತನಾಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. 'ಅಲ್ಲೋಲ ಕಲ್ಲೋಲ' ಹೇಳಿಕೆ ಕೇವಲ ರಾಜಕೀಯ ಹೇಳಿಕೆಯಲ್ಲ, ಮುಂದಿನ ದಿನಗಳಲ್ಲಿ ದಾಖಲೆಗಳೊಂದಿಗೆ ಕೆಲವು ವಿಚಾರಗಳನ್ನು ಬಹಿರಂಗಪಡಿಸುವ ಮುನ್ಸೂಚನೆ ಎಂಬ ಸಂದೇಶವನ್ನು ನೀಡಿದ್ದಾರೆ. KPSC ನೇಮಕಾತಿ ಹಗರಣದ ವಿಚಾರಣೆ KPSC ಹಗರಣದತ್ತ ಎಚ್‌ಡಿಕೆ ಬೆರಳು

ಕುಮಾರಸ್ವಾಮಿ ಅವರ ಇತ್ತೀಚಿನ ಆರೋಪಗಳ ಕೇಂದ್ರಬಿಂದುಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ಅಕ್ರಮವೂ ಒಂದಾಗಿದೆ. ಪಶುವೈದ್ಯಾಧಿಕಾರಿ ನೇಮಕಾತಿ ಪ್ರಕರಣದಲ್ಲಿ ಅಭ್ಯರ್ಥಿಗಳಿಂದ ಭಾರಿ ಮೊತ್ತದ ಹಣಕ್ಕೆ ಬೇಡಿಕೆ ಇಡಲಾಗಿತ್ತು ಎಂಬ ಆರೋಪಗಳು ಜುಲೈನಲ್ಲೇ ಮುನ್ನೆಲೆಗೆ ಬಂದಿದ್ದವು.

ಪ್ರಕರಣದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ, ಒಎಂಆರ್ ಉತ್ತರ ಪತ್ರಿಕೆಗಳ ತಿರುಚಾಟ ಹಾಗೂ ನೇಮಕಾತಿ ಪ್ರಕ್ರಿಯೆಯ ಮೇಲೆ ಪ್ರಭಾವ ಬೀರಿದ ಆರೋಪಗಳು ಕೇಳಿಬಂದಿದ್ದವು. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಪ್ರಕರಣವನ್ನು ಸಿಐಡಿ ತನಿಖೆಗೆ ವರ್ಗಾಯಿಸಿತ್ತು.

ಆ ಬಳಿಕ ಪ್ರಕರಣಕ್ಕೆ ಇಡಿ ಪ್ರವೇಶವಾಗಿದ್ದು, ಆಗಸ್ಟ್‌ನಲ್ಲಿ ಕೆಪಿಎಸ್‌ಸಿ ಕಚೇರಿ ಸೇರಿದಂತೆ 21 ಸ್ಥಳಗಳಲ್ಲಿ ಶೋಧ ನಡೆಸಲಾಗಿತ್ತು. ಮಧ್ಯವರ್ತಿಗಳು ಅಭ್ಯರ್ಥಿಗಳಿಂದ 70–80 ಲಕ್ಷದವರೆಗೆ ಹಣ ಕೇಳಿದ್ದರೆಂಬ ಆರೋಪಗಳೂ ತನಿಖೆಯ ಭಾಗವಾಗಿವೆ. ತನಿಖೆ ಮುಂದುವರಿದಂತೆ ಪ್ರಕರಣ ಮತ್ತಷ್ಟು ಗಂಭೀರ ಸ್ವರೂಪ ಪಡೆದುಕೊಂಡಿದೆ. ಕೆಪಿಎಸ್‌ಸಿ ಪರೀಕ್ಷಾ ನಿಯಂತ್ರಕರಾಗಿ ಕಾರ್ಯನಿರ್ವಹಿಸಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಹಾಗೂ ಮಧ್ಯವರ್ತಿ ಬಸವರಾಜ ಕನ್ನಾಳೆ ಅವರನ್ನು ಸಿಐಡಿ ಬಂಧಿಸಿದ್ದು, ಸೆ.9ರಂದು ಇಬ್ಬರನ್ನೂ 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ತನಿಖೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಒಎಂಆರ್ ತಿರುಚಾಟದ ಆರೋಪಗಳ ಜೊತೆಗೆ 12 ಕೋಟಿಗೂ ಅಧಿಕ ಹಣ ಸಂಗ್ರಹವಾಗಿರಬಹುದೆಂಬ ಅಂಶವೂ ಬೆಳಕಿಗೆ ಬಂದಿದೆ ಎಂದು ವರದಿಯಾಗಿದೆ.ಯುವಕರ ಭಾವನೆಗಳ ಮೇಲೆ ಪರಿಣಾಮ 'ಲಕ್ಷಾಂತರ ಯುವಕರ ಭಾವನೆಗಳನ್ನು ಮಾರಾಟ ಮಾಡಲಾಗಿದೆ'

ಈ ಹಿನ್ನೆಲೆಯಲ್ಲಿ ಕುಮಾರಸ್ವಾಮಿ, ಸರ್ಕಾರಿ ಉದ್ಯೋಗದ ನಿರೀಕ್ಷೆಯಲ್ಲಿರುವ ಯುವಕರ ಭಾವನೆಗಳನ್ನೇ ಹಣಕ್ಕಾಗಿ ಮಾರಾಟ ಮಾಡಲಾಗಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. "ಇದನ್ನು ನಾನು ಹೇಳುತ್ತಿಲ್ಲ; ದಾಖಲೆಗಳು ಹೇಳುತ್ತಿವೆ" ಎಂಬ ಮೂಲಕ ತಮ್ಮ

### ರೇಷನ್‌ಕಾರ್ಡ್ ಇ ಕೆವೈಸಿಗೆ ಸದ್ಯದಲ್ಲೇ ಮೊಬೈಲ್ ಅಪ್ಲಿಕೇಶನ್ ಬಿಡುಗಡೆ



ರೇಷನ್ ಕಾರ್ಡ್ ಇ ಕೆವೈಸಿ ಮುಕ್ತಾಯಕ್ಕೆ ಕೇವಲ 15 ದಿನ ಅಷ್ಟೇ ಬಾಕಿ ಇದೆ. ಇ-ಕೆವೈಸಿ ಆಗದಿದ್ರೆ ರೇಷನ್ ಕಾರ್ಡ್ ರದ್ದಾಗಲಿದೆ. ಆದರೆ ಸರ್ವರ್ ಸಮಸ್ಯೆಯಿಂದಾಗಿ ಇ ಕೆವೈಸಿಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗ್ತಿದೆ. ಇದುವರೆಗೂ ಕೇವಲ 36.44% ಅಷ್ಟೇ ಇ ಕೆವೈಸಿ ಆಗಿದೆ. ಒಂದು ಕಡೆ ಸರ್ವರ್ ಕಾಟ ಮತ್ತೊಂದು ಕಡೆ ಡೆಡ್ ಲೈನ್ ಆತಂಕ ನಡುವೆ ಇದುವರೆಗೂ 36.44% ಅಷ್ಟೇ ಇ ಕೈವೈಸಿ ಆಗಿದೆ. ಈ ಸಂಬಂಧ ಆಹಾರ ಸಚಿವ ರಿಜ್ವಾನ್ ಅರ್ಷದ್ ವಿಕಾಸಸೌಧದಲ್ಲಿ ಹಿರಿಯ ಅಧಿಕಾರಿಗಳು, ಎನ್ ಐ ಸಿ ಹಾಗೂ ಕೆ ಹೆಚ್ ಡಿ ಸಿ ಅಧಿಕಾರಿಗಳೊಂದಿಗೆ ತುರ್ತು ಸಭೆ ನಡೆಸಿ ಆಹಾರ ಇಲಾಖೆಯ ಸರ್ವರ್ ನಲ್ಲಿ ಉಂಟಾಗುತ್ತಿರುವ ತಾಂತ್ರಿಕ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸೂಚಿಸಿದ್ದಾರೆ. ಅಲ್ಲದೇ ತಮ್ಮದೇ ಮೊಬೈಲ್‌ನಲ್ಲಿ ಇಕೆವೈಸಿ ಮಾಡಿಕೊಳ್ಳಲು ಮೊಬೈಲ್ ಅಪ್ಲಿಕೇಶನ್ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಸಾರ್ವಜನಿಕರು ನ್ಯಾಯಬೆಲೆ ಅಂಗಡಿಗಳಿಗೆ ತೆರಳುವ ಅಗತ್ಯ ಕಡಿಮೆ ಮಾಡುವ ಉದ್ದೇಶದಿಂದ, ಮೊಬೈಲ್ ಮೂಲಕವೇ Face Authentication ಬಳಸಿ ಇ-ಕೆವೈಸಿ ಮಾಡಿಕೊಳ್ಳುವ ಸೌಲಭ್ಯವನ್ನು Directorate of Electronic Delivery of Citizen Services ಸಹಯೋಗದೊಂದಿಗೆ ಅಭಿವೃದ್ಧಿಪಡಿಸಲಾಗುತ್ತಿದೆ. ಈ ಮೊಬೈಲ್ ಅಪ್ಲಿಕೇಶನ್ ಅನ್ನು ಇನ್ನೊಂದು ವಾರದೊಳಗೆ ಸಾರ್ವಜನಿಕರ ಬಳಕೆಗೆ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಇದರಿಂದ ಫಲಾನುಭವಿಗಳು ತಮ್ಮ ಮೊಬೈಲ್‌ನಲ್ಲಿಯೇ ಸ್ವತಃ ಇ-ಕೆವೈಸಿ ಪೂರ್ಣಗೊಳಿಸಬಹುದಾಗಿದೆ. ಇ-ಕೆವೈಸಿ ಪ್ರಕ್ರಿಯೆ ಸುಗಮವಾಗಿ ನಡೆಯಲು ಆಹಾರ ಅಪ್ಲಿಕೇಶನ್‌ನಲ್ಲಿ ಪ್ರತ್ಯೇಕ ಗಣಕಗಳನ್ನೂ ಒದಗಿಸಲಾಗಿದೆ. ಅಲ್ಲದೆ, ರಾಜ್ಯದಲ್ಲಿ ಪ್ರಪ್ರಥಮ ಬಾರಿಗೆ ಆಹಾರ ಇಲಾಖೆಯ ಸರ್ವರ್‌ನ ಸಾಮರ್ಥ್ಯ ಮತ್ತು ಕಾರ್ಯಕ್ಷಮತೆಯನ್ನು ಪರಿಶೀಲಿಸಲು Load Testing ನಡೆಸಲಾಗುತ್ತಿದೆ.

## ದಸರಾ ನೆಪದಲ್ಲಿ ಸರ್ಕಾರಿ ಕೆಲಸ ನಿಲ್ಲಿಸಬಾರದು



ದಸರಾ ಆಚರಣೆಯ ನೆಪದಲ್ಲಿ ಯಾವುದೇ ರೀತಿಯ ಸರ್ಕಾರಿ ಕೆಲಸಗಳನ್ನು ನಿಲ್ಲಿಸಬಾರದು ಎಂದು ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳು, ತಹಶೀಲ್ದಾರರು, ವಿಎಓ ಅಧಿಕಾರಿಗಳು ಎಸ್‌ಐಆರ್ ಕೆಲಸದಲ್ಲಿ ತೊಡಗಿದ್ದಾರೆ. ಆ ಕರ್ತವ್ಯವನ್ನು ಅವರು ನಿರ್ವಹಿಸಬೇಕಿದೆ. ಇದನ್ನು ಮಾಡದಿದ್ದರೆ ಚುನಾವಣಾ ಆಯೋಗ ಕ್ರಮ ಕೈಗೊಳ್ಳಲಿದೆ. ಸರ್ಕಾರದ ಮುಖ್ಯ ಕೆಲಸಗಳನ್ನು ನಿಲ್ಲಿಸದೇ ದಸರಾ ಆಚರಣೆಯ ಸಿದ್ಧತಾ ಕಾರ್ಯದಲ್ಲಿ ತೊಡಗಬೇಕು ಎಂದರು. ಮೇವಿನ ಸಮಸ್ಯೆ, ಮಳೆ ಸೇರಿದಂತೆ ಬರಗಾಲದ ಸಮಸ್ಯೆಯ ಕುರಿತು ಪ್ರತಿದಿನದ ಮಾಹಿತಿ ಬರುತ್ತಿದೆ. ಈಗಾಗಲೇ ಜಿಲ್ಲೆಯಲ್ಲಿ ಒಂದು ಲಕ್ಷ ಮೇವಿನ ಬೀಜದ ಕಿಟ್‌ಗಳನ್ನು ನೀಡಲಾಗಿದೆ. ಬೆಳೆ ಹಾಕಿದರೆ 15 ದಿನಕ್ಕೆ ಮೇವು ಬರುತ್ತದೆ. ಹೆಚ್ಚಿನ ಮೇವು ಬೆಳೆದ ರೈತರಿಗೆ ಹಣ ಕೊಟ್ಟು ಮೇವು ಖರೀದಿಸಲಾಗುವುದು ಎಂದು ಹೇಳಿದರು.ಕೇಂದ್ರಕ್ಕೆ ಬರ ವರದಿ ಸಲ್ಲಿಸುವ ಕುರಿತು ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, 101 ಬರ ಪೀಡಿತ ತಾಲೂಕುಗಳನ್ನು ಘೋಷಣೆ ಮಾಡಲಾಗಿದೆ. ನಾಳೆ ಮತ್ತೊಂದು ನೋಟಿಫಿಕೇಷನ್ ಬರಲಿದೆ. ಹೆಚ್ಚುವರಿ ತಾಲೂಕುಗಳು ಸಹ ಸೇರ್ಪಡೆಯಾಗಲಿವೆ. ಮುಖ್ಯಮಂತ್ರಿಗಳ ಜೊತೆ ಅಥವಾ ಸಚಿವರ ಜೊತೆ ತೆರಳಿ ಕೇಂದ್ರದ ಗೃಹ ಸಚಿವರಿಗೆ ವರದಿ ಸಲ್ಲಿಸಲಾಗುವುದು ಎಂದು ಮಾಹಿತಿ ನೀಡಿದರು.

ಮಂಗಳೂರಿನಲ್ಲಿ ಸಚಿವ ಸಂಪುಟ ಸಭೆ: ಮಂಗಳೂರಿನಲ್ಲಿ ನಡೆಯುವ ಕ್ಯಾಬಿನೆಟ್ ಸಭೆಯಲ್ಲಿ ಹೆಚ್ಚಿನಾಂಶದ್ದು ಆ ಭಾಗಕ್ಕೆ ಸಂಬಂಧಪಟ್ಟ ವಿಷಯಗಳ ಕುರಿತು ತೀರ್ಮಾನಗಳನ್ನು ಕೈಗೊಳ್ಳಲಾಗುತ್ತದೆ. ಕ್ಯಾಬಿನೆಟ್ ತೀರ್ಮಾನ ಆಗುವವರೆಗೂ ನಾವೇನು ಹೇಳುವಂತಿಲ್ಲ. ಮಂಗಳೂರು, ಉಡುಪಿ, ಚಿಕ್ಕಮಗಳೂರು, ಮಡಿಕೇರಿ ಭಾಗಕ್ಕೆ ಸಂಬಂಧಿಸಿದ ನಿರ್ಧಾರ ಆಗುತ್ತದೆ ಎಂದು ಹೇಳಿದರು.

ಸಾಮಾಜಿಕ ಮತ್ತು ಶೈಕ್ಷಣಿಕ ವರದಿ ಜಾರಿಯ ಕುರಿತ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಅನೇಕ ಕಾರಣಗಳಿಂದ ಸಮಾಜದಲ್ಲಿ ಶಿಕ್ಷಣದಿಂದ ವಂಚಿತರಾಗಿದ್ದಾರೆ. ಅಂತವರಿಗೆ ಯೋಜನೆಗಳನ್ನು ರೂಪಿಸಬೇಕಿದೆ. ಸಮಾಜದಲ್ಲಿ ನಿರ್ಲಕ್ಷ್ಯಕ್ಕೆ ಒಳಗಾದ ಸಮುದಾಯಗಳನ್ನು ಮುಖ್ಯವಾಹಿನಿಗೆ ತರುವುದು ಸಾಮಾಜಿಕ ಮತ್ತು ಶೈಕ್ಷಣಿಕ ವರದಿಯ ಮುಖ್ಯ ಉದ್ದೇಶ. ಅದು ನೆನೆಗುದಿಗೆ ಬಿದ್ದರೆ ಆ ಸಮುದಾಯಗಳಿಗೆ ಅನ್ಯಾಯವಾಗುತ್ತದೆ. ಆದಷ್ಟು ಬೇಗ ಇತ್ಯರ್ಥಗೊಳಿಸಿ ಮುಂದುವರಿಸುವುದು ನಮ್ಮ ಮತ್ತು ಸಿದ್ದರಾಮಯ್ಯನವರ

## ಮಹಾನವಮಿ ಹಬ್ಬ ನಮ್ಮ ಜೀವನದಲ್ಲಿ ಅನೇಕ ಪಾಠಗಳನ್ನು ಕಲಿಸುತ್ತದೆ

## ಉಪ ಮುಖ್ಯಮಂತ್ರಿಗಳಿಂದ ತುಮಕೂರು ದಸರಾ-2026 ಲಾಂಛನ ಬಿಡುಗಡೆ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಉಪ ಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ಮಂಗಳವಾರ ತುಮಕೂರು ದಸರಾ-2026ರ ಲಾಂಛನವನ್ನು ಬಿಡುಗಡೆ ಮಾಡಿದರು.

ನಗರದ ಜಿಲ್ಲಾ ಕೇಂದ್ರ ಗ್ರಂಥಾಲಯ ಸಭಾಂಗಣದಲ್ಲಿ ಲಾಂಛನ ಬಿಡುಗಡೆ ಮಾಡಿದ ನಂತರ ಮಾತನಾಡಿದ ಅವರು, ಕಳೆದ ವರ್ಷಗಳಲ್ಲಿ ವಿನ್ಯಾಸಗೊಳಿಸಿದ್ದ ದಸರಾ ಲಾಂಛನವನ್ನೇ ಈ ಬಾರಿಯೂ ದಸರಾ ಉತ್ಸವದ ಲಾಂಛನವನ್ನಾಗಿ ಬಳಸಲಾಗುವುದು ಎಂದು ತಿಳಿಸಿದರು.

ಈ ಬಾರಿಯ ತುಮಕೂರು ದಸರಾವನ್ನು ಅದ್ದೂರಿಯಾಗಿ ಆಚರಿಸಲಾಗುವುದು. ದಸರಾ ಪ್ರಯುಕ್ತ ಏರ್ಪಡಿಸಲಾಗುವ ವಸ್ತುಪ್ರದರ್ಶನದಲ್ಲಿ ಎಐ, ಆಧುನಿಕ ತಂತ್ರಜ್ಞಾನ ಅಭಿವೃದ್ಧಿ ಬಗ್ಗೆ ಅವಕಾಶ ಕಲ್ಪಿಸಲಾಗುವುದು. ಸುಮಾರು 2000ಕ್ಕೂ ಹೆಚ್ಚು ಮಕ್ಕಳಿಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗುವುದು ಎಂದು ಅವರು ಹೇಳಿದರು.

ಮಹಾನವಮಿ ಹಬ್ಬ ನಮ್ಮ ಜೀವನದಲ್ಲಿ ಅನೇಕ ಪಾಠಗಳನ್ನು ಕಲಿಸುತ್ತದೆ. ತುಮಕೂರು ದಸರಾ ಉತ್ಸವ ಜಿಲ್ಲೆಯ ಸಂಸ್ಕೃತಿ, ನಾಗರಿಕತೆ, ಪರಂಪರೆ, ಇತಿಹಾಸವನ್ನು ಪ್ರತಿಬಿಂಬಿಸುತ್ತದೆ. ಉತ್ಸವದಲ್ಲಿ ಎಲ್ಲರೂ ಭಾಗವಹಿಸಬೇಕು. ತುಮಕೂರಿಗೆ ಕೀರ್ತಿ ತರುವ ರೀತಿಯಲ್ಲಿ ದಸರಾ ಉತ್ಸವ ಆಚರಿಸೋಣ ಎಂದು ಕರೆ ನೀಡಿದರು.

ತುಮಕೂರು ದಸರಾ ಉತ್ಸವ 2026' ಕಾರ್ಯಕ್ರಮವು ಅಕ್ಟೋಬರ್ 11 ರಿಂದ ಅಕ್ಟೋಬರ್ 21ರವರೆಗೆ ನಡೆಯಲಿದೆ. ಈ ವರ್ಷದ ತುಮಕೂರು ದಸರಾ ಉತ್ಸವದ ಬಗ್ಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಗಮನಕ್ಕೆ ತರಲಾಗಿದೆ. ಕಾರ್ಯಕ್ರಮಕ್ಕೆ ಆಹ್ವಾನಿಸಲಾಗಿದ್ದು, ಬಿಡುವು ಮಾಡಿಕೊಂಡು ಆಗಮಿಸುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಕಳೆದ ವರ್ಷಗಳ ದಸರಾ ಆಚರಣೆ ಯಶಸ್ವಿ: ಎರಡು ವರ್ಷಗಳ ಹಿಂದೆ ಬಂದ 'ತುಮಕೂರು ದಸರಾ ಉತ್ಸವ' ಪರಿಕಲ್ಪನೆಯು ಇಂದು ಮೈಸೂರು ದಸರಾದಂತೆ ಜನಾಕರ್ಷಿಸುತ್ತಿದೆ. ಜಿಲ್ಲೆಯಲ್ಲಿ ವಿಭಿನ್ನವಾದ ಭಾವನೆಗಳು ಬರದಂತೆ, ಜಾತಿ-ಧರ್ಮವನ್ನು ಮೀರಿ ದಸರಾ ಹಬ್ಬವನ್ನು ಆಚರಿಸಲಾಗುತ್ತಿದೆ. ಕಳೆದ ವರ್ಷ ತುಮಕೂರು ದಸರಾ ಬಹಳ ಯಶಸ್ವಿಯಾಗಿ ನಡೆಯಿತು. ದೇವಸ್ಥಾನದ ಪ್ರತಿಕೃತಿಯು ಮೂಲ ದೇವಸ್ಥಾನದಂತೆ ಗೋಚರಿಸುತ್ತಿತ್ತು. ಹತ್ತು ದಿನ ನಡೆದ ನವದುರ್ಗೆಯರ ಪೂಜೆ, ಹೋಮ-ಹವನಗಳು, ಕವಿಗೋಷ್ಠಿ, ಯುವ ದಸರಾ, ಮಹಿಳಾ ದಸರಾ, ವೈಜ್ಞಾನಿಕ ವಸ್ತುಪ್ರದರ್ಶನ ತುಮಕೂರು ದಸರಾ ಯಶಸ್ಸಿಗೆ ಕಾರಣವಾಯಿತು ಎಂದು ತಿಳಿಸಿದರು.

ಇಸ್ರೋ ಸಂಸ್ಥೆಯವರು ಏರ್ಪಡಿಸಿದ್ದ ರಾಕೆಟ್ ತಯಾರಿಕೆ ವಿಧಾನ ಕುರಿತು ವೈಜ್ಞಾನಿಕ ಮತ್ತು ತಾಂತ್ರಿಕ ವಸ್ತುಪ್ರದರ್ಶನದಿಂದ ಶಾಲಾ ಮಕ್ಕಳ ಕಲಿಕೆಗೆ ಹೆಚ್ಚು ಅನುಕೂಲವಾಯಿತು. 'ಪ್ರಚಂಡ' ಎಂಬ ಯುದ್ಧ ಹೆಲಿಕ್ಯಾಪ್ಟರ್ ಪ್ರದರ್ಶನಕ್ಕೆ ಇಡಲಾಗಿತ್ತು. ಹೆಲಿ ರೈಡ್ ಆಯೋಜನೆಯನ್ನು ಜನರು ಸಂಭ್ರಮಿಸಿದರು. ಅಳ್ವಾಸ್‌ನ 150 ಕಲಾವಿದರ ತಂಡವು ಸಾಂಸ್ಕೃತಿಕ ಕಾರ್ಯಕ್ರಮವನ್ನು ಸುಂದರವಾಗಿ ನಡೆಸಿಕೊಟ್ಟರು. ಎಲ್ಲರನ್ನು ಒಳಗೊಂಡಂತೆ ದಸರಾ ಆಚರಿಸುವ ಪ್ರಯತ್ನ ಮಾಡಲಾಯಿತು. ಮೈಸೂರಿನಂತೆ ದಸರಾವನ್ನು ತುಮಕೂರಿನಲ್ಲಿ ಆಚರಿಸಲಾಗುತ್ತಿದೆ ಎಂಬ ಮಾತುಗಳು ಎಲ್ಲೆಡೆಯಿಂದ ಕೇಳಿ ಬಂದವು. ಎಲ್ಲ ರೀತಿಯ ಜನರು, ಜನಪ್ರತಿನಿಧಿಗಳು, ಅಧಿಕಾರಿ ಮತ್ತು ಸಿಬ್ಬಂದಿ ಪಾಲ್ಗೊಂಡರು. ಸಿಎಂ ಆಗಿದ್ದ ಸಿದ್ದರಾಮಯ್ಯ ಅವರು ಅನುದಾನ ಬಿಡುಗಡೆ ಮಾಡಿ ಸಹಕರಿಸಿದರು ಎಂದು ಪರಮೇಶ್ವರ ಅವರು ಕಳೆದ ವರ್ಷದ ದಸರಾ ಆಚರಣೆ ಬಗ್ಗೆ ವಿವರಿಸಿದರು.

ದಸರಾ ಉತ್ಸವವು ಕೇವಲ ಒಂದು ಕಾರ್ಯಕ್ರಮವಾಗಿರದೆ, ಜಿಲ್ಲೆಯ ಸಂಸ್ಕೃತಿ, ಪರಂಪರೆ ಹಾಗೂ ಕಲೆಯನ್ನು ಪರಿಚಯಿಸುವ "ಊರ ಹಬ್ಬ"ವಾಗಬೇಕು. ದಸರಾ ಉತ್ಸವದ ಮೂಲಕ ಮಕ್ಕಳು, ಯುವಕರು ಹಾಗೂ ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಅವಕಾಶ ಕಲ್ಪಿಸಲಾಗುವುದು. ಯುವ ಕಲಾವಿದರ ಪ್ರತಿಭೆ ಪ್ರದರ್ಶನಕ್ಕೆ ಉತ್ತಮ ವೇದಿಕೆ ದೊರೆಯಲಿದ್ದು, ನೃತ್ಯ ತಂಡಗಳು ಸೇರಿದಂತೆ ವಿವಿಧ ಕಲಾ ತಂಡಗಳು ಭಾಗವಹಿಸಲು ಅವಕಾಶ ನೀಡಲಾಗುವುದು. ಉತ್ಸವದಲ್ಲಿ ಸಾರ್ವಜನಿಕರ ಹೆಚ್ಚಿನ ಪಾಲ್ಗೊಳ್ಳುವಿಕೆಗೆ ಆದ್ಯತೆ ನೀಡಲಾಗುವುದು. ಜನರ ಅಭಿಪ್ರಾಯವೇ ನಮ್ಮ ಅಭಿಪ್ರಾಯವಾಗಿದ್ದು, ಜಾತಿ-ಧರ್ಮದ ಭೇದವಿಲ್ಲದೆ ಎಲ್ಲರೂ ಒಗ್ಗೂಡಿ ಉತ್ಸವ ಆಚರಿಸಬೇಕು ಎಂದು ಹೇಳಿದರು.

ತುಮಕೂರಿನ ಅಮಾನಿಕೆರೆಯನ್ನು ಅಭಿವೃದ್ಧಿಪಡಿಸಿ ಕಲರ್‌ಫುಲ್ ಆಗಿ ರೂಪಿಸುವ ಮೂಲಕ ಪ್ರಮುಖ ಆಕರ್ಷಣೆಯನ್ನಾಗಿ ಮಾಡಲಾಗುವುದು. ಈ ಬಾರಿ ಅಮಾನಿಕೆರೆಯಲ್ಲಿ ನಿರ್ಮಿಸುವ 2ನೇ ಪುಟಕ್ಕೆ

## ನಾಗರಕಟ್ಟೆ ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆಯಲ್ಲಿ ಡಿಸಿಎಂ, ಪರಮೇಶ್ವರ್ ಭಾಗಿ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ನಗರದ ಬಿಜಿಎಸ್ ವೃತ್ತದ ನಾಗರಕಟ್ಟೆ ಹಿಂದೂ ಮಹಾಗಣಪತಿಯ ಪ್ರತಿಷ್ಠಾಪನೆ ಕಾರ್ಯಕ್ರಮ ಸೋಮವಾರ ಗಣೇಶ ಚತುರ್ಥಿಯಂದು ವಿವಿಧ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಶ್ರದ್ಧಾ ಭಕ್ತಿಯಿಂದ ನೆರವೇರಿತು.ಅಟವಿ ಸುಕ್ಷೇತ್ರದ ಅಟವಿ ಶಿವಲಿಂಗ ಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ ನಡೆದ ಪೂಜಾ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಭಾಗವಹಿಸಿದ್ದರು. ಮೂರ್ತಿ ಪ್ರತಿಷ್ಠಾಪನೆಗೂ ಮುನ್ನ ವಿವಿಧ ಹೋಮ, ಹವನ, ವಿಶೇಷ ಪೂಜೆಗಳನ್ನು ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಧಿಕಾರಿ ಶುಭಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ, ಮಾಜಿ ಸಚಿವ ಸೊಗಡು ಶಿವಣ್ಣ, ಸ್ವಾಗತ ಸಮಿತಿಅಧ್ಯಕ್ಷ ಟಿ.ಬಿ. ಶೇಖರ್ ಮೊದಲಾದವರು ಹಾಜರಿದ್ದರು.

ಸ್ವಾಗತ ಸಮಿತಿ ಉಪಾಧ್ಯಕ್ಷರುಗಳಾದ ಮಂಜೇಶ್, ಮನು ಜಿ, ಪ್ರಧಾನ ಕಾರ್ಯದರ್ಶಿ ಆರ್‌ಎಲ್ ರಮೇಶ್ ಬಾಬು, ಕಾರ್ಯದರ್ಶಿ ಆರ್.ಕೃಷ್ಣಯ್ಯ, ಸಹ ಕಾರ್ಯದರ್ಶಿ ಮಾರಣ್ಣ ಪಾಳೇಗಾರ್, ಖಜಾಂಚಿಟಿ. ವೈ.ಯಶಸ್ ಸೇರಿದಂತೆ ನೂರಾರು ಭಕ್ತರು ಗಣೇಶ ಪ್ರತಿಷ್ಠಾಪನಾ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಸ್ವಾಗತ ಸಮಿತಿಅಧ್ಯಕ್ಷ ಟಿ.ಬಿ. ಶೇಖರ್ ಮಾತನಾಡಿ, ಈ ಬಾರಿ ಸಂಪೂರ್ಣವಾಗಿ ಪರಿಸರ ಸ್ನೇಹಿ ಗಣಪತಿ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿದೆ. ಪ್ರತಿದಿನ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ನೂರಾರು ಭಕ್ತರು ಭಾಗವಹಿಸಿದ್ದರು.ಎಲ್ಲರಿಗೂ ಪ್ರಸಾದ ವಿನಿಯೋಗ, ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

### ಸೆ.17ರಂದು "ಶ್ರೀ ವಿಶ್ವಕರ್ಮ ಜಯಂತಿ"

**ತುಮಕೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಜಿಲ್ಲಾ ವಿಶ್ವಕರ್ಮ ಸೇವಾ ಸಮಿತಿ ಸಹಯೋಗದಲ್ಲಿ ಸೆಪ್ಟೆಂಬರ್ 17ರಂದು ಬೆಳಗ್ಗೆ 11 ಗಂಟೆಗೆ ನಗರದ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ "ಶ್ರೀ ವಿಶ್ವಕರ್ಮ ಜಯಂತಿ" ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಕಾರ್ಯಕ್ರಮದಲ್ಲಿ ನಿವೃತ್ತ ಜಿಲ್ಲಾಧಿಕಾರಿ ಹಾಗೂ ಕರ್ನಾಟಕ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ: ಸಿ. ಸೋಮಶೇಖರ್ ಉಪನ್ಯಾಸ ನೀಡಲಿದ್ದಾರೆ.**

### ಶೈಕ್ಷಣಿಕ ರಂಗದಲ್ಲಿ ಸಲ್ಲಿಸಿದ ಮಹತ್ತರ ಸೇವೆಯನ್ನು ಗುರುತಿಸಿ

## 'ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್'




ಚಿಕ್ಕನಾಯಕನಹಳ್ಳಿ ಮೂಲದ ಶೈಕ್ಷಣಿಕ ಮಾರ್ಗದರ್ಶಕ ಮತ್ತು ಕೌನ್ಸಿಲರ್ ಪಾಂಡುರಂಗ ವಿ.ಎಲ್. ಅವರು ಶೈಕ್ಷಣಿಕ ರಂಗದಲ್ಲಿ ಸಲ್ಲಿಸಿದ ಮಹತ್ತರ ಸೇವೆಯನ್ನು ಗುರುತಿಸಿ ಪ್ರತಿಷ್ಠಿತ 'ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್' ಗೌರವಕ್ಕೆ ಭಾಜನರಾಗಿದ್ದಾರೆ.

ಪಾಂಡುರಂಗ ವಿ.ಎಲ್. ಅವರು ಇದುವರೆಗೆ 200ಕ್ಕೂ ಹೆಚ್ಚು ವೃತ್ತಿ ಮಾರ್ಗದರ್ಶನ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿ, 3 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಭವಿಷ್ಯದ ದಾರಿ ತೋರಿ ಪ್ರೇರಣೆಯಾಗಿದ್ದಾರೆ. ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ಕೌನ್ಸಿಲರ್ ಆಗಿ ಸೇವೆ ಸಲ್ಲಿಸಿರುವ ಇವರಿಗೆ 8 ಪ್ರಮಾಣಪತ್ರಗಳು ಹಾಗೂ 2 ಪ್ರಶಸ್ತಿಗಳು ಲಭಿಸಿವೆ.ಅಲ್ಲದೆ, ಇವರು 'Learn from the Best' ಎಂಬ ಯೂಟ್ಯೂಬ್ ಚಾನೆಲ್ ಮೂಲಕ 577 ಕ್ಕೂ ಹೆಚ್ಚು ಉಪಯುಕ್ತ ವಿಡಿಯೋಗಳನ್ನು ಹಂಚಿಕೊಂಡಿದ್ದು, ವಿದ್ಯಾರ್ಥಿಗಳಿಂದ ಹಾಗೂ ಸಾರ್ವಜನಿಕರಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ. ಇವರ ಈ ನಿರಂತರ ಸಾಧನೆಯನ್ನು ಗುರುತಿಸಿ 'ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್' ಸಂಸ್ಥೆಯು 'IBR Achiever' ಪ್ರಶಸ್ತಿಯನ್ನು ನೀಡಿ ಗೌರವಿಸಿದೆ.

## ಸಣ್ ಸುದ್ದಿ



ಮಧುಗಿರಿ ಪಟ್ಟಣದಲ್ಲಿರುವ ಪೊಲೀಸ್ ಠಾಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮಹಿಳಾ ಸಿಬ್ಬಂದಿಗೆ ಪಿಎಸ್ ಐ ಎಂ.ಎಸ್. ಚಂದ್ರಶೇಖರ್ ರವರು ಗೌರಿ ಹಬ್ಬದ ಅಂಗವಾಗಿ ಬಾಗಿನ ರೂಪದಲ್ಲಿ ಸೀರೆಗಳನ್ನು ನೀಡಿ ಸಹೋದರತ್ವ ಮೆರೆದಿರುವುದು ಸಾರ್ವಜನಿಕರಲ್ಲಿ ಮೆಚ್ಚುಗೆಗೆ ವ್ಯಕ್ತವಾಗಿದೆ.. ವಿಶೇಷವಾಗಿ ಪೊಲೀಸ್ ದೆಫೇದರ್ ರೆಹನಾ ಬಾನ್ ಅವರಿಗೂ ನೀಡಿರುವುದು ಕೋಮು ಸೌಹಾರ್ದತೆಗೆ ಸಾಕ್ಷಿಯಾಯಿತು



ತುಮಕೂರು ನಗರ ಶಾಸಕರ ಕಛೇರಿಯಲ್ಲಿ ಗೌರಿ–ಗಣೇಶ ಹಬ್ಬದಂದು ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಲಾಯಿತು. ಪೂಜಾ ಕಾರ್ಯಕ್ರಮದಲ್ಲಿ ಶಾಸಕರಾದ ಜಿ.ಬಿ.ಜ್ಯೋತಿಗಣೇಶ್, ಜಿಲ್ಲಾ ಬಿಜೆಪಿ ಅಧ್ಯಕ್ಷ ಹೆಬ್ಬಾಕ ರವಿಶಂಕರ್, ವೈ.ಎಚ್. ಹುಚ್ಚಯ್ಯ, ಟಿ.ಎಲ್.ಕುಂಭಯ್ಯ, ಮಾಜಿ ಉಪ ಮೇಯರ್ ಟಿ.ಕೆ.ನರಸಿಂಹಮೂರ್ತಿ, ಜೆಡಿಎಸ್ ನಗರಾಧ್ಯಕ್ಷ ಟಿ.ಎಚ್. ಜಯರಾಂ, ಎನ್.ಎಸ್.ಶಿವಣ್ಣ, ಮೋಹನ್ ಕುಮಾರ್, ಸತ್ಯಮಂಗಲ ಜಗದೀಶ್, ಹನುಮಂತರಾಜು, ಬಿಜೆಪಿ ನಗರಾಧ್ಯಕ್ಷ ಧನುಶ್ ನಾಯಕ್, ವೇದಮೂರ್ತಿ, ಜ್ಯೋತಿ ತಿಪ್ಪೇಸ್ವಾಮಿ, ಆರ್.ಎ.ಸುರೇಶ್ ಕುಮಾರ್, ಮಲ್ಲಿಕಾರ್ಜುನ ಕೆಂಕೆರೆ, ಪ್ರೀತಂ ಜೈನ್, ರಮೇಶ್, ಮುಂತಾದವರಿದ್ದರು.



ಮಧುಗಿರಿ ::ಶಿಕ್ಷಣ ದೇಶ ಕಟ್ಟುವ ಪ್ರೇರಕ ಶಕ್ತಿ ಎಂದು ಪ್ರಾಂಶುಪಾಲ ಎಂ.ವೈ.ಹೊಸಮನಿ ಅಭಿಪ್ರಾಯ ವ್ಯಕ್ತಪಡಿಸಿದರು. ಟಿ.ವಿ.ವಿ ಪ್ರ.ದ ಕಾಲೇಜಿನಲ್ಲಿ ಏರ್ಪಡಿಸಿದ್ದ ಭಾರತ ರತ್ನ ವಿಶ್ವೇಶ್ವರಯ್ಯ ಜನ್ಮದಿನದಲ್ಲಿ ಮಾತನಾಡಿ,,ಕರ್ನಾಟಕದ ಅಭಿವೃದ್ಧಿ ಕಾರ್ಯಕ್ರಮದ ಜೀವನಾಡಿಯಾಗಿದ್ದ ಸರ್.ಎಂ.ವಿ.ಅಮರಜೀವಿ ಎಂದರು.

ಸಾಹಿತಿ ಮ.ಲ.ನ.ಮೂರ್ತಿ ಮಾತನಾಡಿ, ಜನರ ತಿಳಿವಳಿಕೆ ಬೆಳೆದು,ನೈಪುಣ್ಯತೆ ಹೆಚ್ಚಿ ಸತ್ಯ ಶುದ್ಧ ಸಂಪಾದನೆಯ ಮಾರ್ಗಹಿಡಿಯಿರಿ ಸರ್ ಎಂ.ವಿ.ಅವರ ಜನ್ಮದಿನ (ಎಂಜಿನಿಯರ್ ದಿನ) ಯುವಜನಾಂಗಕ್ಕೆ ಪ್ರೇರಕ ಶಕ್ತಿಯಾಗಲಿ ಎಂದರು. ಉಪನ್ಯಾಸಕರಾದ ತೋಹಿದಾಬಾನು,ವಿಮಲಾ.ಸಿ.ಆರ್.ಸಂವಾದ ನಡೆಸಿಕೊಟ್ಟರು. ವಿದ್ಯಾಶ್ರೀ ಪ್ರಾರ್ಥಿಸಿ, ಹಸೀನಾ ನಿರೂಪಿಸಿ ಬೆರಳಚ್ಚುಗಾರ್ತಿ ಸುಮತಿ ವಂದಿಸಿದರು

# ರಂಗಭೂಮಿ ಕಲಾವಿದರ ಶಾಲಾ ಮಕ್ಕಳು ಎಂಬ ಕನ್ನಡ ಸಿನಿಮಾ ತೆರೆಗೆ




ಸೂರ್ಯಪ್ರಗತಿನ್ಯೂಸ್.ಕಾಂ

ಸೃಷ್ಟಿ ಸಿನಿ ಕ್ರಿಯೇಷನ್ ರವರು ನಿರ್ಮಿಸಿರುವ ಶಾಲಾ ಮಕ್ಕಳು ಎಂಬ ಕನ್ನಡ ಕಲರ್ ಸಿನಿಮಾ ತೆರೆಗೆ ಬರಲು ಸಿದ್ದವಾಗಿದೆ. ತುಮ ಕೂರು ಜಿಲ್ಲೆಯ ರಂಗಭೂಮಿ ಕಲಾವಿದರು ಮತ್ತು ನಗರದ ಸುತ್ತಮುತ್ತಲಿನ ಶಾಲೆಗಳಾದ, ಹಿರೇಹಳ್ಳಿ ಸುಮತಿ ಶಾಲೆ, ಸಿದ್ದಗಂಗಾ, ಕ್ಯಾತ್ಸಂದ್ರ, ಉಮಾ ಪ್ರಗತಿ ಮೈದಾಳ ರಸ್ತೆ, ನಿವೇದಿತಾ ಕ್ಯಾತ್ಸಂದ್ರ, ವಿದ್ಯಾವಾಹಿನಿ ಕಾಲೇಜ್, ಮುಂತಾದ ಶಾಲೆಗಳಲ್ಲಿ ಚಿತ್ರೀಕರಿಸಲಾಗಿದೆ. ಈ ಚಿತ್ರದ ವಿಶೇಷ ವೆಂದರೆ 1000,ಹೆಚ್ಚಿನ ಮಕ್ಕಳು ನಟಿಸಿರುತಾರೆ. ಮಕ್ಕಳ ಕನಸ್ಸು ಮತ್ತು ಅವರ ಭವಿಷ್ಯ ಹಾಗೂ ಶಿಕ್ಷಣದ ಮಹತ್ವ ಸಾರುವ ಚಿತ್ರವಿದು. ತುಮಕೂರಿನ ಬಿ.ಹೆಚ್ ರಸ್ತೆಯ ಗಾಯತ್ರಿ ಚಿತ್ರ ಮಂದಿರದಲ್ಲಿ ಶೀಘ್ರವೇ ತೆರೆ ಕಾಣಲಿದೆ ವಿದ್ಯಾರ್ಥಿಗಳ ಭಾವನೆಯನ್ನು ಹೃದಯ ಸ್ಪರ್ಶಯಾಗಿ ಕಟ್ಟಿಕೊಟ್ಟಿರುವ ಚಿತ್ರವಿದು. ಇಂದಿನ ಮಕ್ಕಳ ಬದುಕಿನಲ್ಲಿ ಶಿಕ್ಷಣದ ಜೊತೆಗೆ ಸ್ನೇಹ, ಗುರುಗಳ ಮಾರ್ಗದರ್ಶನ ನಡುವೆ ಸಾಗುವ ಕಥೆ ಇದಾಗಿದ್ದು ಕುಟುಂಬ ಸಮೇತ ನೋಡ ಬಹುದಾಗಿದೆ.

ಇಂದಿನ ಸಮಾಜದಲ್ಲಿ ಮಕ್ಕಳ, ಭಾವನೆ ಮತ್ತು ಕನಸುಗಳನ್ನುಅರ್ಥ ಮಾಡಿಕೊಂಡು ಪ್ರಬುದ್ಧ ಪ್ರಜೆಗಳನ್ನ ಹೇಗೆ ರೂಪಿಸಬಹುದು ಎಂಬಸಂದೇಶ ಇದೆ. ಈ ಚಿತ್ರದಲ್ಲಿ ಹೊಸ ಪ್ರತಿಭೆಗಳಿಗೆ ಅವಕಾಶ ನೀಡಲಾಗಿದ್ದು ಶರತ್ ಬಾಬು ರವರ ನಿರ್ದೇಶನ, ಸಾಹಿತ್ಯ ಮತ್ತು ಸಂಭಾಷಣೆ ಯಲ್ಲಯ್ಯ ರವರದು ಹಾಗೂ ಸಂಗೀತ ಕ್ಲಾರೆನ್ಸ್, ನೀಡಿದದ್ದಾರೆ.

# ಸೆ.17ರಂದು ಎಸ್‌ಎಸ್‌ಐಟಿಯಲ್ಲಿ 'ಸ್ವಾಗತಂ 2026' ಫ್ರೆಶರ್ಸ್ ಡೇ

ತುಮಕೂರು: ನಗರದ ಶ್ರೀ ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಎಸ್‌ಎಸ್‌ಐಟಿ)ಯಲ್ಲಿ 48ನೇ ಬ್ಯಾಚ್‌ನ ನೂತನ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ 'ಸ್ವಾಗತಂ 2026' ಸೆ.17ರಂದು ಬೆಳಿಗ್ಗೆ 10 ಗಂಟೆಗೆ ಎಸ್‌ಎಸ್‌ಐಟಿ ಆವರಣದಲ್ಲಿ ನಡೆಯಲಿದೆ. ಕಾರ್ಯಕ್ರಮವನ್ನು ಶ್ರೀ ಸಿದ್ಧಾರ್ಥ ಅಕಾಡೆಮಿ ಆಫ್ ಹೈಯರ್ ಎಜುಕೇಷನ್‌ನ ಗೌರವಾನ್ವಿತ ಕುಲಾಧಿಪತಿ ಡಾ. ಜಿ. ಪರಮೇಶ್ವರ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಇಸ್ರೋ ಮಾಜಿ ವೈಜ್ಞಾನಿಕ ಕಾರ್ಯದರ್ಶಿ ಹಾಗೂ ಖ್ಯಾತ ವಿಜ್ಞಾನಿ ಡಾ. ಪಿ.ಜಿ. ದಿವಾಕರ್, ಇನ್ಫೋಸಿಸ್ ಮೈಸೂರು ಅಭಿವೃದ್ಧಿ ಕೇಂದ್ರದ ಮುಖ್ಯಸ್ಥ ಹಾಗೂ ಉಪಾಧ್ಯಕ್ಷ ಶ್ರೀ ವಿನಾಯಕ ಪಿ. ಹೆಗಡೆ ಭಾಗವಹಿಸಲಿದ್ದಾರೆ.

ಗೌರವ ಅತಿಥಿಗಳಾಗಿ ಡಾ. ಕೆ.ಬಿ. ಲಿಂಗೇಗೌಡ, ಡಾ. ಅಶೋಕ್ ಮೆಹತಾ, ಡಾ. ವಿವೇಕ್ ವೀರಯ್ಯ ಹಾಗೂ ಡಾ. ಸುನಿಲ್ ಕೆ. ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ಎಸ್‌ಐಟಿ ಪ್ರಾಂಶುಪಾಲ ಡಾ. ಮಹಾಂತೇಶ್ ಎಂ. ನಾಡಕಟ್ಟಿ ವಹಿಸಲಿದ್ದಾರೆ.

# ಮಳೆ ಕೊರತೆ,ಬರ, ಬೆಲೆ ಏರಿಕೆ ನಡುವೆ ಗೌರಿ–ಗಣೇಶ ಹಬ್ಬ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು– ಮಳೆ ಕೊರತೆ, ತೀವ್ರ ಬರ, ರಣ ಬಿಸಿಲು ಹಾಗೂ ಬೆಲೆ ಏರಿಕೆ ನಡುವೆಯೂ ಗೌರಿ–ಗಣೇಶ ಹಬ್ಬವನ್ನು ಕಲ್ಪತರುನಾಡಿನಲ್ಲಿ ಅತ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು. ಈ ಬಾರಿ ಎಂದೂ ಕಂಡರಿಯದ ಮಳೆ ಕೊರತೆ, ರಣ ಬಿಸಿಲು, ಬರದ ಛಾಯೆ ಆವರಿಸಿದೆ. ಈ ನಡುವೆ ಬೆಲೆ ಏರಿಕೆ ಎಂದಿಗಿಂತಲೂ ದುಪ್ಪಟವಾಗಿದೆ. ಆದರೂ ರೈತ ಸಮೂಹ, ನಗರ ಪ್ರದೇಶದ ಜನತೆ ಸೇರಿದಂತೆ ಎಲ್ಲರೂ ಸಹ ಗೌರಿ–ಗಣೇಶ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಿದರು.

ಮುಂಜಾನೆಯೇ ಮಹಿಳೆಯರು ತಮ್ಮ ತಮ್ಮ ಮನೆಗಳ ಬಾಗಿಲಲ್ಲಿ ಮೊರಗಳನ್ನು ಇಟ್ಟು ಪೂಜೆ ಸಲ್ಲಿಸುವ ಮೂಲಕ ಗೌರಿ ಹಬ್ಬ ಆಚರಣೆಗೆ ಸಾಂಕೇತಿಕವಾಗಿ ಚಾಲನೆ ನೀಡಿದರು.

ನಂತರ ಮನೆಯಲ್ಲಿ ಗೌರಿ ಮೂರ್ತಿ ಇಟ್ಟು ಪೂಜೆ ಸಲ್ಲಿಸಿ ಬಾಗಿನ ಅರ್ಪಿಸಿ ಹಬ್ಬವನ್ನು ವಿಶೇಷ ರೀತಿಯಲ್ಲಿ ಆಚರಿಸಿದರು.

ಮನೆಯಲ್ಲಿ ಪೂಜೆ, ವ್ರತ ಆಚರಣೆ ಬಳಿಕ ತಮ್ಮ ಬಡಾವಣೆಗಳ ವ್ಯಾಪ್ತಿಯಲ್ಲಿ ಗೌರಿ ಮೂರ್ತಿ ಪೂಜಿಸಿ ಬಾಗಿನ ಅರ್ಪಿಸಲು ಸಿದ್ದತೆ ಮಾಡಲಾಗಿದ್ದ ದೇವಾಲಯಗಳಿಗೆ ತೆರಳಿದ ಸುಮಂಗಲಿಯರು, ಮಕ್ಕಳು, ಯುವತಿಯರು



ಗೌರಿಗೆ ವಿಶೇಷ ಪೂಜೆ ಸಲ್ಲಿಸಿ ಬಾಗಿನ ಅರ್ಪಿಸಿ ಆಶೀರ್ವಾದ ಪಡೆದರು. ನಗರದ ಬಿ.ಹೆಚ್. ರಸ್ತೆಯ ಟಿಜಿಎಂಸಿ ಬ್ಯಾಂಕ್ ಆವರಣದಲ್ಲಿರುವ ಮಹಾಲಕ್ಷ್ಮಿ ದೇವಾಲಯ, ಭದ್ರಮ್ಮ ವೃತ್ತದಲ್ಲಿರುವ ಸೋಮನಾಥೇಶ್ವರ ದೇವಾಲಯ, ಕುಣಿಗಲ್ ರಸ್ತೆಯ ಬನಶಂಕರಿಯಮ್ಮ, ರಾಮಕೃಷ್ಣನಗರದ ಸಾಯಿಬಾಬ ಮಂದಿರ ಸೇರಿದಂತೆ ನಗರದ ವಿವಿಧ ದೇವಾಲಯಗಳಲ್ಲಿ ಗೌರಿ ಹಬ್ಬದ ಪ್ರಯುಕ್ತ ವಿಶೇಷ ಪೂಜಾ ಕೈಂಕರ್ಯಗಳು ನೆರವೇರಿದವು. ಈ ಎಲ್ಲ ದೇವಾಲಯಗಳಲ್ಲೂ ಮಹಿಳೆಯರು, ಮಕ್ಕಳು, ಯುವತಿಯರು ಗೌರಿಗೆ ಬಾಗಿನ ಅರ್ಪಿಸಿ ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡಿದ್ದು ವಿಶೇಷವಾಗಿತ್ತು.

ಮುಂಜಾನೆಯಿಂದಲೇ ನಗರದ ವಿವಿಧ ದೇವಾಲಯಗಳಲ್ಲಿ ಗೌರಿ ಹಬ್ಬದ ಅಂಗವಾಗಿ ಸುಮಂಗಲಿಯರು ತವರಿನಿಂದ ಬಂದಂತಹ ಬಾಗಿನವನ್ನು ಗೌರಿ ಅರ್ಪಿಸಿದ್ದಲ್ಲದೆ, ಮಹಿಳೆಯರು ಪರಸ್ಪರ ಅರಿಶಿನ ಕುಂಕುಮ ನೀಡುವ ಮೂಲಕ ಹಬ್ಬದವನ್ನು ಆಚರಿಸಿದ್ದು ಸಾಮಾನ್ಯ ದೃಶ್ಯವಾಗಿತ್ತು.

ಗೌರಿ ಮೂರ್ತಿ, ಮೊರ, ಹೂವು, ಹಣ್ಣು, ಮಾವಿನ ಎಲೆ ಸೇರಿದಂತೆ ಇನ್ನಿತರೆ ಅಗತ್ಯ ವಸ್ತುಗಳ ಬೆಲೆ ಎಷ್ಟೇ ದುಪ್ಪಟ್ಟಾದರೂ ಅದನ್ನು ಲೆಕ್ಕಿಸದೆ ಗೌರಿ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಿದ್ದು ಜಿಲ್ಲೆಯಾದ್ಯಂತ ಕಂಡು ಬಂತು.

ಅದ್ದೂರಿ ಗಣೇಶೋತ್ಸವ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಗಣೇಶ ಚತುರ್ಥಿಯನ್ನು ಬೃಹತ್ ಪೆಂಡಾಲ್‌ಗಳನ್ನು ನಿರ್ಮಿಸುವ ಮೂಲಕ ಗಣೇಶಮೂರ್ತಿ ಪ್ರತಿಷ್ಠಾಪಿಸಿ ಅದ್ದೂರಿಯಾಗಿ ಆಚರಿಸಲಾಯಿತು.

ನಗರದ ಹೈಸ್ಕೂಲ್ ಮೈದಾನದಲ್ಲಿ ಗೌರಿ–ಗಣೇಶಮೂರ್ತಿಗಳ ಮಾರಾಟಕ್ಕೆ ಪಾಲಿಕೆ ವತಿಯಿಂದ ವ್ಯವಸ್ಥೆ ಮಾಡಿಕೊಡಲಾಗಿತ್ತು. ಹಾಗಾಗಿ ಹೈಸ್ಕೂಲ್ ಮೈದಾನದಲ್ಲಿ ಜನಜಂಗುಳಿಯೇ ನೆರೆದು ಗೌರಿ–ಗಣೇಶ ಮೂರ್ತಿಗಳನ್ನು ಖರೀದಿ ತಮ್ಮ ತಮ್ಮ ಊರು, ಮನೆಗಳಿಗೆ ಕೊಂಡೊಯ್ದು ಸಂಭ್ರಮದಿಂದ ಹಬ್ಬವನ್ನು ಆಚರಿಸಿದ್ದು ಕಂಡು ಬಂತು.

# ಸೆ.18ರಂದು ಪಿ.ಆರ್.ತಿಪ್ಪೇಸ್ವಾಮಿ ಸಮಗ್ರ ಸಾಹಿತ್ಯ ಸಂಪುಟಗಳ ಲೋಕಾರ್ಪಣೆ ಸಮಾರಂಭ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಶ್ರೀದೇವಿ ಸಮೂಹ ವಿದ್ಯಾ ಸಂಸ್ಥೆಗಳ ಸಹಯೋಗದಲ್ಲಿ ಸೆಪ್ಟೆಂಬರ್ 18ರಂದು ಬೆಳಗ್ಗೆ 11.30 ಗಂಟೆಗೆ ನಗರದ ಸಿರಾ ರಸ್ತೆ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜು ಆಡಿಟೋರಿಯಂನಲ್ಲಿ "ಪಿ.ಆರ್. ತಿಪ್ಪೇಸ್ವಾಮಿ ಸಮಗ್ರ ಸಾಹಿತ್ಯ ಸಂಪುಟಗಳ ಲೋಕಾರ್ಪಣೆ ಸಮಾರಂಭ"ವನ್ನು ಏರ್ಪಡಿಸಲಾಗಿದೆ.

ಸಮಾರಂಭವನ್ನು ಉಪ ಮುಖ್ಯಮಂತ್ರಿ ಹಾಗೂ ಕಂದಾಯ, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಸಚಿವ ಡಾ: ಜಿ. ಪರಮೇಶ್ವರ ಉದ್ಘಾಟಿಸುವರು. ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮಗ್ರ ಸಂಪುಟಗಳ ಲೋಕಾರ್ಪಣೆ ಹಾಗೂ ಪಿ.ಆರ್.ಟಿ. ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡುವರು. ನಗರ ಶಾಸಕ ಜಿ.ಬಿ. ಜ್ಯೋತಿಗಣೇಶ್ ಅಧ್ಯಕ್ಷತೆವಹಿಸುವರು. ಕಾರ್ಯಕ್ರಮದಲ್ಲಿ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು ಭಾಗವಹಿಸುವರು.

## ಸಣ್ ಸುದ್ದಿ

# ಹೆಚ್‌ಐವಿ ತಡೆಗೆ ಜಾಗೃತಿ ಹಾಗೂ ಮುನ್ನೆಚ್ಚರಿಕೆ ಅತ್ಯಗತ್ಯ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಹೆಚ್‌ಐವಿ ಮತ್ತು ಏಡ್ಸ್ ಕುರಿತು ಪ್ರತಿಯೊಬ್ಬರೂ ಸಮಗ್ರ ಅರಿವು ಹೊಂದುವುದರ ಜೊತೆಗೆ, ಸೋಂಕು ಹರಡುವ ವಿಧಾನಗಳು ಹಾಗೂ ತಡೆಗಟ್ಟುವ ಕ್ರಮಗಳ ಬಗ್ಗೆ ಜಾಗೃತರಾಗಬೇಕು ಎಂದು ಶ್ರೀದೇವಿ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಆರ್. ಕೆ.ಮುನಿಸ್ವಾಮಿರವರು ತಿಳಿಸಿದರು.



ನಗರದ ಶಿರಾರಸ್ತೆಯ ಶ್ರೀದೇವಿ ನರ್ಸಿಂಗ್ ಕಾಲೇಜಿನ ವತಿಯಿಂದ ಸೆ.10 ರಂದು ಗುರುವಾರ ಬೆಳಿಗ್ಗೆ 10 ಗಂಟೆಗೆ ಹೆಚ್.ಐ.ವಿ ಜಾಗೃತಿ ಕಾರ್ಯಕ್ರಮವನ್ನು ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಮಾತನಾಡಿ ಅವರು ಹೆಚ್.ಐ.ವಿ ಸೋಂಕಿನ ಬಗ್ಗೆ ಸಮಾಜದಲ್ಲಿರುವ ತಪ್ಪು–ಕಲ್ಪನೆಗಳು ಮತ್ತು ಭಯವನ್ನು ನಿವಾರಿಸುವುದು ಅಗತ್ಯವಾಗಿದೆ. ಸೋಂಕಿತ ವ್ಯಕ್ತಿಗಳನ್ನು ತಾರತಮ್ಯದಿಂದ ಕಾಣದೆ, ಅವರಿಗೆ ಮಾನವೀಯತೆ ಮತ್ತು ಆತ್ಮಸ್ಥೈರ್ಯ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ಆಸ್ಪತ್ರೆಯ ಹೆಚ್.ಐ.ವಿ ಆಪ್ತಸಮಾಲೋಚಕರಾದ ರಂಗಸ್ವಾಮಿರವರು ಮಾತನಾಡುತ್ತಾ ಅಸುರಕ್ಷಿತ ಲೈಂಗಿಕ ಸಂಪರ್ಕ, ಸೋಂಕಿತ ರಕ್ತದ ವರ್ಗಾವಣೆ, ಸೋಂಕಿತ ಸೂಜಿಗಳು ಹಾಗೂ ತಾಯಿಯಿಂದ ಮಗುವಿಗೆ ಸೋಂಕು ಹರಡುವಂತಹ ಪ್ರಮುಖ ಮಾರ್ಗಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ಸುರಕ್ಷಿತ ಜೀವನಶೈಲಿ, ಅಗತ್ಯ ಮುನ್ನೆಚ್ಚರಿಕೆ ಹಾಗೂ ಸಮಯಕ್ಕೆ ಸರಿಯಾಗಿ ಹೆಚ್‌ಐವಿ ಪರೀಕ್ಷೆ ಮಾಡಿಸಿಕೊಳ್ಳುವುದರಿಂದ ಸೋಂಕಿನ ನಿಯಂತ್ರಣಕ್ಕೆ ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳಿಗೆ ಕಿರುನಾಟಕದ ಮೂಲಕ ವಿದ್ಯಾರ್ಥಿಗಳಿಗೆ ಜಾಗೃತಿ ನೀಡಲಾಗಿತ್ತು. ಇದೇ ಸಂದರ್ಭದಲ್ಲಿ ಶ್ರೀದೇವಿ ವಿದ್ಯಾಮಂದಿರ ಮುಖ್ಯಶಿಕ್ಷಕರಾದ ಆರ್.ವಿಜಯ್‌ಕುಮಾರ್, ಶ್ರೀದೇವಿ ನರ್ಸಿಂಗ್ ಕಾಲೇಜಿನ ಮಾನಸಿಕ ಆರೋಗ್ಯ ವಿಭಾಗದ ಮುಖ್ಯಸ್ಥರಾದ ಡಾ.ಟಿ.ಎಸ್.ಭೀಮರಾಜು, ಡಾ.ಚಿಕ್ಕಹನುಮಂತಯ್ಯ, ಡಾ.ವಿದ್ಯಾಶ್ರೀ, ಡಾ.ಹೆಚ್.ಪಿ.ಪ್ರಕಾಶ್ ಹಾಗೂ ಶ್ರೀದೇವಿ ವಿದ್ಯಾಮಂದಿರ ಶಾಲೆಯ ವಿದ್ಯಾರ್ಥಿಗಳು, ಬೋಧಕ–ಬೋಧಕೇತರ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

# ಡಿ.ಜೆ.ಸಿಸ್ಟಮ್ ಬಳಕೆ ನಿಷೇಧಿಸಿ



ತುಮಕೂರು: ಗಣೇಶ ಹಬ್ಬದ ಪ್ರಯುಕ್ತ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ, ವಿಸರ್ಜನೆ, ಮೆರವಣಿಗೆ ಸಂದರ್ಭದಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಸೆಪ್ಟೆಂಬರ್ 22ರವರೆಗೆ ಜಿಲ್ಲೆಯಾದ್ಯಂತ ಡಿ.ಜೆ.ಸಿಸ್ಟಂಗಳ ಬಳಕೆ, ಹೆಚ್ಚಿನ ಶಬ್ದ ಹೊರಸೂಸುವ ಧ್ವನಿವರ್ಧಕಗಳ ಬಳಕೆಯನ್ನು ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶುಭ ಕಲ್ಯಾಣ್ ಆದೇಶ ಹೊರಡಿಸಿದ್ದಾರೆ.

ಡಿ.ಜೆ.ಸಿಸ್ಟಂಗಳಬಳಕೆ,ಹೆಚ್ಚಿನಶಬ್ದಹೊರಸೂಸುವ ಧ್ವನಿವರ್ಧಕಗಳ ಬಳಕೆಯಿಂದ ಗರ್ಭಿಣಿಯರು, ನವಜಾತ ಶಿಶು, ವಯೋವೃದ್ಧರು, ಬಾಣಂತಿಯರು, ಹೃದಯ ಸಂಬಂಧಿ ಖಾಯಿಲೆ ಇರುವವರು, ಅನಾರೋಗ್ಯದ ನಿಮಿತ್ತ ಚಿಕಿತ್ಸೆ ಪಡೆಯುತ್ತಿರುವ ಸಾರ್ವಜನಿಕರ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವುದರಿಂದ ಈ ಆದೇಶವನ್ನು ಹೊರಡಿಸಲಾಗಿದೆ.

# ಹೊಸ ಪ್ರಯತ್ನಗಳ ಮೂಲಕ ದಸರಾ ಉತ್ಸವಕ್ಕೆ ಮತ್ತಷ್ಟು ಮೆರುಗು

ಸೂರ್ಯಪ್ರಗತಿನ್ಯೂಸ್.ಕಾಂ 1ನೇ ಪುಟದಿಂದ

ಸುಮಾರು 100 ಅಡಿ ಎತ್ತರಕ್ಕೆ ಚಿಮ್ಮುವ ಕಾರಂಜಿ ವಿಶೇಷ ಆಕರ್ಷಣೆಯಾಗಲಿದೆ. ಇದರಿಂದ ಅಮಾನಿಕೆರೆಯು ಪ್ರವಾಸಿಗರು ಹಾಗೂ ಸಾರ್ವಜನಿಕರನ್ನು ಸೆಳೆಯುವ ಪ್ರಮುಖ ಕೇಂದ್ರವಾಗಲಿದೆ ಎಂದರು.

ಅದೇ ರೀತಿ ನಗರದ ಶ್ರೀ ಡಾ: ಶಿವಕುಮಾರ ಸ್ವಾಮೀಜಿ ವೃತ್ತವನ್ನು ತುಮಕೂರು ಸೆಂಟರ್ ಆಫ್ ಅಟ್ರಾಕ್ಷನ್ ಆಗಿ ಅಭಿವೃದ್ಧಿಪಡಿಸುವ ಉದ್ದೇಶವಿದೆ. ಇದಕ್ಕೆ ಅಗತ್ಯವಿರುವ ಕೆಲವು ವಸ್ತುಗಳನ್ನು ಚೀನಾದಿಂದ ತರಿಸಲಾಗುತ್ತಿದೆ. ತುಮಕೂರನ್ನು ವಿಶೇಷವಾಗಿ ಗುರುತಿಸುವಂತಹ ಹೊಸ ಪ್ರಯತ್ನಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಈ ಬಾರಿ ಮಕ್ಕಳು ಹಾಗೂ ವಾಹನಗಳ ಬಗ್ಗೆ ಆಸಕ್ತಿ ಹೊಂದಿರುವವರನ್ನು ಆಕರ್ಷಿಸಲು ಮಾಡರ್ನ್ ಕಾರುಗಳ ಶೋ ಆಯೋಜಿಸಲಾಗುತ್ತಿದೆ. ಇಂತಹ ಹೊಸ ಪ್ರಯತ್ನಗಳ ಮೂಲಕ ದಸರಾ ಉತ್ಸವಕ್ಕೆ ಮತ್ತಷ್ಟು ಮೆರುಗು ತರುವ ಮೂಲಕ ಜಿಲ್ಲೆಯ ಸಂಸ್ಕೃತಿ, ನಾಗರಿಕತೆ ಹಾಗೂ ಪರಂಪರೆಯನ್ನು ಉಳಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯವನ್ನು ಮಾಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕ ಜಿ.ಬಿ ಜ್ಯೋತಿಗಣೇಶ್ ಮಾತನಾಡಿ, ಕಳೆದ 2 ವರ್ಷಗಳಿಂದಲೂ ತುಮಕೂರು ದಸರಾ ಉತ್ಸವ ಯಶಸ್ವಿ ಕಾಣಲು ಡಾ: ಜಿ. ಪರಮೇಶ್ವರ ಅವರು ಕಾರಣರಾಗಿದ್ದಾರೆ. ನಗರದಲ್ಲಿ ಉದ್ದೇಶಿತ ಅಮಾನಿಕೆರೆ ಕಾರಂಜಿ ಹಾಗೂ ತುಮಕೂರು ಸ್ಕ್ವೇರ್ ನಿರ್ಮಾಣ ಕಾರ್ಯವನ್ನು ಸ್ವಾಗತಿಸುತ್ತೇನೆ. ಕಳೆದ ವರ್ಷಗಳಂತೆ ಈ ಬಾರಿಯೂ ದಸರಾ ಉತ್ಸವ–2026ರ ಯಶಸ್ಸಿಗೆ ಸಂಪೂರ್ಣವಾಗಿ ಸಹಕರಿಸಲಾಗುವುದು ಎಂದು ಶುಭ ಕೋರಿದರು.

ಕಾರ್ಯಕ್ರಮದಲ್ಲಿ ಶಾಸಕ ಜ್ಯೋತಿ ಗಣೇಶ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಜಿ. ಚಂದ್ರಶೇಖರ್ ಗೌಡ, ಬಿಎಂಟಿಸಿ ಉಪಾಧ್ಯಕ್ಷ ನಿಕೇತ್ ರಾಜ್ ಎಂ., ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಪಾಲಿಕೆ ಆಯುಕ್ತೆ ಶುಭಾ, ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಸೇರಿದಂತೆ ಉಪವಿಭಾಗಾಧಿಕಾರಿ ನಾಹಿದಾ ಜಂ ಜಂ, ಸೇರಿದಂತೆ ಹಲವು ಗಣ್ಯರು ಹಾಗೂ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# 3 ತಿಂಗಳಲ್ಲಿ 6ನೇ ಹುದ್ದೆ ಪಡೆದ ಐಎಎಸ್ ಅಧಿಕಾರಿ

ಬೆಂಗಳೂರು: ಕರ್ನಾಟಕ ಐಎಎಸ್ ಅಧಿಕಾರಿ ಯಲನಗೌಡ ಶಿವನಗೌಡ ಪಾಟೀಲ ಅವರಿಗೆ ಮೂರೇ ತಿಂಗಳಲ್ಲಿ ಆರನೇ ಹುದ್ದೆಯನ್ನು ರಾಜ್ಯ ಸರ್ಕಾರ ನೀಡಿದೆ. ಇದರಲ್ಲಿ ಮೂರು ಹುದ್ದೆಗಳು ಬದಲಾಗಿದ್ದು, ಈಗ ಮೂರು ಹುದ್ದೆಗಳಲ್ಲಿ ಕಾರ್ಯನಿರ್ವಹಿಸಲಿದ್ದಾರೆ.

2012ನೇ ಬ್ಯಾಚ್‌ನ ಐಎಎಸ್ ಅಧಿಕಾರಿಯಾಗಿರುವ ಪಾಟೀಲ ಅವರು ಕಳೆದ ಮೂರು ವರ್ಷ ಕರ್ನಾಟಕ ಕೃಷಿ ಇಲಾಖೆ ಆಯುಕ್ತರಾಗಿ ಕಾರ್ಯನಿರ್ವಹಿಸಿದ್ದರು.

ಜೂನ್ ತಿಂಗಳಲ್ಲಿ ಅವರನ್ನು ವರ್ಗಾವಣೆ ಮಾಡಿ ಕರ್ನಾಟಕ ಆರೋಗ್ಯ ಟ್ರಸ್ಟ್ ಕಾರ್ಯನಿರ್ವಾಹಕ ನಿರ್ದೇಶಕರ ಹುದ್ದೆಗೆ ನೇಮಿಸಲಾಗಿತ್ತು.

ಜುಲೈ 21ರಂದು ಕರ್ನಾಟಕ ರಾಜ್ಯ ಕೌಶಲ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ವೃತ್ತಿ ಪರ ತರಬೇತಿ ಹಾಗೂ ಕೌಶಲ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಎರಡು ಹುದ್ದೆಗಳನ್ನು ಹೆಚ್ಚುವರಿಯಾಗಿ ನೀಡಲಾಗಿತ್ತು.ಆಗಸ್ಟ್ 31ರಂದು ಕರ್ನಾಟಕ ರಾಜ್ಯ ಕೌಶಲ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ವೃತ್ತಿ ಪರ ತರಬೇತಿ ಹಾಗೂ ಕೌಶಲ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಎರಡು ಹುದ್ದೆಗಳ ಹೆಚ್ಚುವರಿ ಹುದ್ದೆಯಿಂದ ಬಿಡುಗಡೆ ಮಾಡಿ ಅವರಿಗೆ ಸಣ್ಣ, ಅತಿ ಸಣ್ಣ ಹಾಗೂ ಸೂಕ್ಷ್ಮ ಕೈಗಾರಿಕೆಗಳ ನಿರ್ದೇಶಕರ ಹುದ್ದೆಗೆ ನೇಮಕ ಮಾಡಲಾಗಿತ್ತು. ಈಗ ಅವರು ಎರಡು ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.

ಇದರ ನಡುವೆ ಮಂಗಳವಾರ ಹೊರಡಿಸಿರುವ ಆದೇಶದ ಪ್ರಕಾರ ವೈ.ಎಸ್.ಪಾಟೀಲ ಅವರಿಗೆ ಕರ್ನಾಟಕ ರೇಷ್ಮೆ ಮಾರುಕಟ್ಟೆ ನಿಗಮ( ಏಖಖಅ) ವ್ಯವಸ್ಥಾಪಕ ನಿರ್ದೇಶಕರ ಹುದ್ದೆಗೆ ಹೆಚ್ಚುವರಿಯಾಗಿ ನೇಮಿಸಲಾಗಿದೆ. ಇದರೊಂದಿಗೆ ಮತ್ತೆ ಮೂರು ಹುದ್ದೆಗಳನ್ನು ಪಾಟೀಲರು ನಿಭಾಯಿಸಲಿದ್ದಾರೆ. 2026 ರ ಆರಂಭದಲ್ಲಿ ಕೃಷಿ ಇಲಾಖೆ ಆಯುಕ್ತರ ಹುದ್ದೆ ಜೊತೆಗೆ ರಾಷ್ಟ್ರೀಯ ತೋಟಗಾರಿಕೆ ಮಿಷನ್ ನಿರ್ದೇಶಕರ ಹುದ್ದೆಯನ್ನು ವೈ.ಎಸ್.ಪಾಟೀಲ ಅವರಿಗೆ ಹೆಚ್ಚುವರಿಯಾಗಿ ನೀಡಲಾಗಿತ್ತು.

# ವಿಧಿ ವಿಧಾನಗಳೊಂದಿಗೆ ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ನಗರದ ಸೋಮೆಕಟ್ಟೆ ಮಠದಆವರಣದಲ್ಲಿ ವಿಶೇಷ ಅಲಂಕೃತ ಮಂಟಪದಲ್ಲಿ ಸೋಮವಾರ ಗಣೇಶ ಹಬ್ಬದಂದು ವಿಶ್ವ ಹಿಂದೂ ಪರಿಷದ್ ಹಾಗೂ ಭಜರಂಗದಳದ 9ನೇ ವರ್ಷದ ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನಾ ಮಹೋತ್ಸವ ವೈಭವದಿಂದ ನೆರವೇರಿತು. ಇದರ ಅಂಗವಾಗಿ ಬೆಳಗಿನಿಂದಲೂ ವಿವಿಧ ಧಾರ್ಮಿಕ, ಪೂಜಾ ವಿಧಿವಿಧಾನಗಳು ನೆರವೇರಿದವು.

ಅಲಂಕೃತ ಮಂಟಪದಲ್ಲಿ ಗಣೇಶನ ಭವ್ಯ ಮೂರ್ತಿಯನ್ನು ಪ್ರತಿಷ್ಠಾಪಿಸಿ, ಗಣಪತಿ ಹೋಮ, ವಿಶೇಷ ಪೂಜೆ ಹಾಗೂ ಮಹಾಮಂಗಳಾರತಿಯನ್ನು ನೆರವೇರಿಸಲಾಯಿತು .ಸಾರ್ವಜನಿಕರಿಗೆ ತೀರ್ಥ ಪ್ರಸಾದ ವಿನಿಯೋಗ ಹಾಗೂ ಅನ್ನ ಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಶಾಸಕ ಜಿ.ಬಿ. ಜ್ಯೋತಿಗಣೇಶ್, ಜಿಲ್ಲಾ ಬಿಜೆಪಿ ಅಧ್ಯಕ್ಷ ಹೆಬ್ಬಾಕರವಿಶಂಕರ್, ಸ್ವಾಗತ ಸಮಿತಿಅಧ್ಯಕ್ಷಡಾ.



ಜೆ. ಲಕ್ಷ್ಮೀಕಾಂತ್, ಕಾರ್ಯದರ್ಶಿ ಪ್ರದೀಪ್, ಮೆರವಣಿಗೆ ಸಮಿತಿಅಧ್ಯಕ್ಷಕೋರಿ ಮಂಜುನಾಥ್, ಗಣೇಶೋತ್ಸವದ ಮಾರ್ಗದರ್ಶಕರಾದ ವೈ.ಹೆಚ್. ಹುಚ್ಚಯ್ಯ, ಸೇರಿದಂತೆ ವಿಶ್ವ ಹಿಂದೂ ಪರಿಷದ್, ಭಜರಂಗದಳದ ಹಲವಾರು ಮುಖಂಡರು ಹಾಜರಿದ್ದರು. ಈ ಬಾರಿ ನಗರದ ಹಲವು ಸಂಘಗಳು ಪ್ರತಿಷ್ಠಾಪಿಸಿರುವ ಗಣಪತಿಗಳು ಒಳಗೊಂಡ ಸಾಮೂಹಿಕ ಗಣೇಶ ವಿಸರ್ಜನಾ ಮಹೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಸ್ವಾಗತ ಸಮಿತಿ ಕಾರ್ಯದರ್ಶಿ ಬಿ.ಜಿ. ಪ್ರದೀಪ್ ಹೇಳಿದರು.

13 ದಿನಗಳ ಕಾಲ ಪ್ರತಿ ದಿನ ವಿವಿಧ ಸಾಂಸ್ಕೃತಿಕ, ಸಾಂಪ್ರದಾಯಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.ಈ ತಿಂಗಳ 26ರಂದು ಗಣಪತಿ ವಿಸರ್ಜನಾ ಮಹೋತ್ಸವ ನಡೆಯಲಿದೆ.ಈ ಬಾರಿಯ ವಿಶೇಷವಾಗಿ ನಗರದ ವಿವಿಧೆಡೆ ಸಂಘಸಂಸ್ಥೆಗಳು ಪ್ರತಿಷ್ಠಾಪಿಸಿರುವ ಗಣಪತಿಗಳನ್ನು ಒಟ್ಟುಗೂಡಿಸಿ ಸಾಮೂಹಿಕ ವಿಸರ್ಜನಾಕಾರ್ಯಕ್ರಮ ಹಮ್ಮಿಕೊಂಡಿರುವುದು ವಿಶೇಷವಾಗಿದೆ.

# ಗೌರಿ–ಗಣೇಶ ಹಬ್ಬಕ್ಕೆ ಗ್ರಾಮದ ಹೆಣ್ಣು ಮಕ್ಕಳಿಗೆ ಸೀರೆ, ಅರಿಶಿನ–ಕುಂಕುಮ

ಸೂರ್ಯಪ್ರಗತಿನ್ಯೂಸ್.ಕಾಂ

ಕೊಡಿಗೇನಹಳ್ಳಿ: ಹಬ್ಬವೆಂದರೆ ಸಂಭ್ರಮ, ಸಡಗರ, ಪೂಜೆ–ಪುನಸ್ಕಾರ ಮಾತ್ರವಲ್ಲ; ಅದನ್ನು ಮತ್ತೊಬ್ಬರ ಸಂತೋಷಕ್ಕೆ ಕಾರಣವಾಗಿಸುವುದೂ ನಿಜವಾದ ಹಬ್ಬದ ಅರ್ಥ. ಇಂತಹ ಸೇವಾ ಮನೋಭಾವಕ್ಕೆ ಮಾದರಿಯಾಗಿದ್ದಾರೆ ಮಧುಗಿರಿ ತಾಲೂಕಿನ ಕೊಡಿಗೇನಹಳ್ಳಿ ಹೋಬಳಿಯ ದೊಡ್ಡ ಮಾಲೂರು ಗ್ರಾಮದ ಮಾಜಿ ಗ್ರಾಪಂ ಸದಸ್ಯ ಹಾಗೂ ಕೆ.ಎನ್.ಆರ್. ಅಭಿಮಾನಿ ಡಿ.ಪಿ. ನರಸಿಂಹಮೂರ್ತಿ.

ಗೌರಿ–ಗಣೇಶ ಹಬ್ಬದ ಸಂದರ್ಭದಲ್ಲಿ ಪ್ರತಿ ವರ್ಷ ಗ್ರಾಮದ ಹೆಣ್ಣು ಮಕ್ಕಳಿಗೆ ಸೀರೆ, ಅರಿಶಿನ–ಕುಂಕುಮ ಸೇರಿದಂತೆ ಬಾಗಿನ ನೀಡಿ ಗೌರವಿಸುವ ಮೂಲಕ ನರಸಿಂಹಮೂರ್ತಿ ಅವರು ವಿಶಿಷ್ಟ ಸೇವಾ ಪರಂಪರೆಯನ್ನು ಬೆಳೆಸಿಕೊಂಡಿದ್ದಾರೆ. ಕಳೆದ ಸುಮಾರು 9 ವರ್ಷಗಳಿಂದ ಯಾವುದೇ ನಿರೀಕ್ಷೆಯಿಲ್ಲದೆ ಈ ಕಾರ್ಯವನ್ನು ಮುಂದುವರಿಸಿಕೊಂಡು ಬಂದಿರುವುದು ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರವಾಗಿದೆ. ಹಬ್ಬದ ದಿನಗಳಲ್ಲಿ ಗ್ರಾಮದ ಹೆಣ್ಣು ಮಕ್ಕಳನ್ನು ಆತ್ಮೀಯವಾಗಿ ಕರೆದು ಬಾಗಿನ



ನೀಡುವ ಮೂಲಕ ಅವರೊಂದಿಗೆ ಹಬ್ಬದ ಸಂತೋಷವನ್ನು ಹಂಚಿಕೊಳ್ಳುತ್ತಿದ್ದಾರೆ.

ಸಾವಿತ್ರಮ್ಮ ಗೃಹಿಣಿ

ಯಾವುದೇ ಪ್ರಚಾರದ ಉದ್ದೇಶವಿಲ್ಲದೆ ಸುಮಾರು ಒಂಬತ್ತು ವರ್ಷಗಳಿಂದ ನಡೆಯುತ್ತಿರುವ ಈ ಕಾರ್ಯವು ಗ್ರಾಮದ ಹೆಣ್ಣು ಮಕ್ಕಳಲ್ಲಿ ವಿಶೇಷ ಮೆಚ್ಚುಗೆ ಮೂಡಿಸಿದೆ. ಹಬ್ಬದ ಸಂದರ್ಭದಲ್ಲಿ ನಮ್ಮನ್ನು ನೆನಪಿಸಿಕೊಂಡು ಸೀರೆ, ಅರಿಶಿನ–ಕುಂಕುಮ ನೀಡಿ ಗೌರವಿಸುವುದು ಸಂತಸ ತಂದಿದೆ. ಗೌರಿ–ಗಣೇಶ ಹಬ್ಬದ ಸಂಭ್ರಮವನ್ನು ಕೇವಲ ತಮ್ಮ ಕುಟುಂಬಕ್ಕೆ ಸೀಮಿತಗೊಳಿಸದೆ ಇಡೀ ಗ್ರಾಮದ ಹೆಣ್ಣು ಮಕ್ಕಳೊಂದಿಗೆ ಹಂಚಿಕೊಳ್ಳುತ್ತಾರೆ.

ಹಣ, ಆಸ್ತಿ, ಅಧಿಕಾರಕ್ಕಿಂತ ಮನುಷ್ಯರ ಸಂತೋಷ ಮತ್ತು ಆತ್ಮೀಯತೆ ದೊಡ್ಡದು ಗ್ರಾಮದ ಹೆಣ್ಣು ಮಕ್ಕಳಿಗೆ ಬಾಗಿನ ನೀಡುವ ಮೂಲಕ ಹಬ್ಬದ ಸಂಭ್ರಮದಲ್ಲಿ ತಮ್ಮದೊಂದು ಪಾಲನ್ನು ಸೇರಿಲಿ ಎಂಬುದು ನನ್ನ ಬಯಕೆ. ಬಾಗಿನ ನೀಡುವ ಕಾರ್ಯವನ್ನು ಕೇವಲ ಒಂದು ವರ್ಷದ ಕಾರ್ಯಕ್ರಮವಾಗಿ ನೋಡದೆ, ಸತತ ಒಂಬತ್ತು ವರ್ಷಗಳಿಂದ ಮುಂದುವರಿಸಿಕೊಂಡು ಬಂದಿದ್ದೇನೆ. ಕೊಡಿಗೇನಹಳ್ಳಿ ಹೋಬಳಿಯ ದೊಡ್ಡ ಮಾಲೂರು ಗ್ರಾಮದಲ್ಲಿ ಗೌರಿ–ಗಣೇಶ ಹಬ್ಬಕ್ಕೆ ಗ್ರಾಮದ ಹೆಣ್ಣು ಮಕ್ಕಳಿಗೆ ಸೀರೆ ಅರಿಶಿನ–ಕುಂಕುಮ ವಿತರಣೆ ಮಾಡುತ್ತಿರುವ ಗ್ರಾಪಂ ಸದಸ್ಯ ಹಾಗೂ ಕೆ.ಎನ್.ಆರ್. ಅಭಿಮಾನಿ ಡಿ.ಪಿ. ನರಸಿಂಹಮೂರ್ತಿ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಪಾವಗಡದಲ್ಲಿ ಮಾದರ ಮಹಾಸಭಾ ಸಭೆ: ಶೀಘ್ರದಲ್ಲೇ ಪ್ರತಿಭಾ ಪುರಸ್ಕಾರಕ್ಕೆ ನಿರ್ಧಾರ

ಸೂರ್ಯಪ್ರಗತಿನ್ಯೂಸ್.ಕಾಂ




ಪಾವಗಡ,: ಪಾವಗಡ ತಾಲ್ಲೂಕು ಮಾದರ ಮಹಾಸಭಾ ವತಿಯಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ದಿನಾಂಕ ನಿಗದಿ ಹಾಗೂ ಸದಸ್ಯತ್ವ ನೋಂದಣಿ ಕುರಿತು ಪೂರ್ವಭಾವಿ ಸಭೆಯು ಇಂದು ನಗರದಲ್ಲಿ ನಡೆಯಿತು. ಸಭೆಯನ್ನು ಉದ್ದೇಶಿಸಿ ಮಾತನಾಡಿದ ನಿವೃತ್ತ ಪ್ರಾಂಶುಪಾಲ ಬಸವಲಿಂಗಪ್ಪ ಅವರು, "ಭಾರತದ ವಿದ್ಯಾಭ್ಯಾಸ ಇಡೀ ಪ್ರಪಂಚಕ್ಕೆ ಮಾದರಿಯಾಗಿದೆ. ಆದರೆ ನಮ್ಮ ಮಕ್ಕಳಿಗೆ ಸರಿಯಾದ ರೀತಿಯಲ್ಲಿ ಶಿಕ್ಷಣದ ಬಗ್ಗೆ ಮುನ್ನೋಟ ಮತ್ತು ಮಾರ್ಗದರ್ಶನ ನೀಡಬೇಕಿದೆ" ಎಂದು ಹೇಳಿದರು. "ಮಾದಿಗ ಜಾತಿ ಎಂದರೆ ಕರುಣಾಮಯಿ ಜಾತಿ. ನಾವು ಎಲ್ಲರೂ ಸಂಘಟಿತರಾಗಬೇಕು. ರಾಮಾಯಣ, ಮಹಾಭಾರತ ಎರಡೂ ಯುಗಗಳಲ್ಲೂ ನಮ್ಮ ಜಾತಿಯ ಹೆಸರಿದೆ, ಜಾಂಬವಂತರ ಇತಿಹಾಸವಿರುವ ನಮ್ಮ ಸಮುದಾಯದಲ್ಲಿ ಇಂದು ಅಸೂಯೆ, ದ್ವೇಷ ತುಂಬಿ ತುಳುಕುತ್ತಿದೆ. ಅದನ್ನೆಲ್ಲ ಬಿಟ್ಟು ನಾವೆಲ್ಲ ಒಂದಾಗಿ ಸಂಘಟನೆ ಕಟ್ಟಬೇಕು. ದೇಶದಲ್ಲಿ ರಾಜಕೀಯವಾಗಿ, ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ನಾವು ಒಗ್ಗಟ್ಟಿನಿಂದ ಇದ್ದರೆ ಮಾತ್ರ ಅಭಿವೃದ್ಧಿ ಸಾಧ್ಯ" ಎಂದು ಕರೆ ನೀಡಿದರು.ನಂತರ ಮಾತನಾಡಿದ ಮಾದರ ಮಹಾಸಭಾ ತಾಲ್ಲೂಕು ಅಧ್ಯಕ್ಷ ನರಸಿಂಹಪ್ಪ ಅವರು, "ಮುಂದಿನ ಒಂದು ತಿಂಗಳ ಒಳಗೆ ತಾಲ್ಲೂಕು ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಆಯೋಜಿಸಬೇಕು" ಎಂದು ಸಭೆಗೆ ಮನವಿ ಮಾಡಿದರು. ಈ ಕಾರ್ಯಕ್ರಮದಲ್ಲಿ ಖಖಐಅ, ಕಗಅ ಮತ್ತು ಪದವಿಯಲ್ಲಿ ಹೆಚ್ಚು ಅಂಕ ಪಡೆದ ಮಾದಿಗ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲು ತೀರ್ಮಾನಿಸಲಾಯಿತು. ಸಭೆಯಲ್ಲಿ ಮಾದರ ಮಹಾಸಭಾ ಪದಾಧಿಕಾರಿಗಳು, ವಿವಿಧ ದಲಿತ ಸಂಘಟನೆಗಳ ಮುಖಂಡರು, ನಿವೃತ್ತ ಅಧಿಕಾರಿಗಳು ಹಾಗೂ ಸಮುದಾಯದ ಹಿರಿಯರು ಭಾಗವಹಿಸಿದ್ದರು.

